ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01,	Issue: 293	RNI Number : KNKAN/25/A2770	06-11-2026	Friday	Page 04,	Price 2/-	suddinimmuru@gmail.com	Mob:-8660146563
ಸಂಪುಟ :01	ಸಂಚಿಕೆ:293	ರಾಯಚೂರು	06-11-2026	ಶುಕ್ರವಾರ	ಪುಟ 04	ಬೆಲೆ ರೂ.2/-	Postal Reg Number:RCR/L/RNP/117/2026-28	

ಪ್ರತಿ ರೈತನಿಗೆ ಬರ ಪರಿಹಾರವಾಗಿ ಗರಿಷ್ಠ ₹5,000 ಇನ್‌ಪುಟ್ ಸಬ್ಸಿಡಿ ನೀಡಲು ತೀರ್ಮಾನ

ಬೆಂಗಳೂರು: ಬರಪೀಡಿತ ರೈತರಿಗೆ ತಲಾ 5,000 ರೂ. ಪರಿಹಾರ ನೀಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಈಗ ಮೊದಲ ಹಂತದಲ್ಲಿ 2,500 ರೂ.ಗಳನ್ನು ಡಿಬಿಟಿ ಮೂಲಕ ನೇರವಾಗಿ ರೈತರಿಗೆ ತಲುಪಿಸಲಾಗುತ್ತಿದೆ. ಉಳಿದ 2,500 ರೂ.ಗಳನ್ನು ಮುಂದಿನ ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಗುರುವಾರ ಸಿಎಂ ಯಾದಗಿರಿ ಜಿಲ್ಲೆಯ 1,06,462 ರೈತರಿಗೆ ಪ್ರತಿಯೊಬ್ಬರಿಗೂ 2,500 ರೂ.ಗಳಂತೆ ಮೊದಲ ಕಂತಿನ ಇನ್‌ಪುಟ್ ಸಬ್ಸಿ ಡಿ ಮೊತ್ತ 17.43 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿ ಮಾತನಾಡಿದರು.

ಶೀಘ್ರವೇ ಎರಡನೇ ಕಂತಿನ ಪರಿಹಾರ ಬಿಡುಗಡೆ: ಇದರ ಜೊತೆಗೆ, 15 ಜಿಲ್ಲೆಗಳಿಗೆ ಪಾವತಿ ಕಡತಗಳ ತಯಾರಿಕೆ ಪ್ರಕ್ರಿಯೆಯಲ್ಲಿದೆ. ಉತ್ತರ ಕನ್ನಡ, ಕೋಲಾರ, ಕೊಪ್ಪಳ, ಚಾಮರಾಜನಗರ, ಧಾರವಾಡ, ಬಳ್ಳಾರಿ, ಬೀದರ್, ಬೆಂಗಳೂರು ನಗರ, ಹಾವೇರಿ, ಬೆಂಗಳೂರು ದಕ್ಷಿಣ, ದಾವಣಗೆರೆ, ದಕ್ಷಿಣ ಕನ್ನಡ, ಕಲಬುರಗಿ, ಮಂಡ್ಯ ಮತ್ತು ವಿಜಯನಗರ ಎಲ್ಲಾ ಜಿಲ್ಲೆಗಳಲ್ಲಿರುವ ಅರ್ಹ ರೈತರಿಗೆ ಮೊದಲ ಕಂತಿನ ಇನ್‌ಪುಟ್ ಸಬ್ಸಿ ಡಿಯನ್ನು ಆದಷ್ಟು ಶೀಘ್ರವಾಗಿ ವಿತರಿಸಲಾಗುವುದು. ಮುಂದಿನ 15-20 ದಿನಗಳಲ್ಲಿ 2ನೇ ಕಂತಿನ ಮೊತ್ತವನ್ನು ಬಿಡುಗಡೆ ಮಾಡಲಾಗುವುದು. ರೈತರ ಬದುಕು ಹಸನು ಮಾಡಬೇಕು ಎಂಬ ನಿಲುವಿಗೆ ಸರ್ಕಾರ ಬದ್ಧ. ಸರ್ಕಾರದ ಪರಿಹಾರದಿಂದ ಸಂಪೂರ್ಣ ನೆರವಾಗುತ್ತದೆ ಎಂದು ಹೇಳಲಾಗುವುದಿಲ್ಲ. ಆದರೆ ಸ್ವಲ್ಪಮಟ್ಟಿಗಿನ ನೆರವು ಒದಗಿಸಲಾಗುತ್ತಿದೆ ಎಂದರು.



ಪರಿಷ್ಕೃತ ಮಾನದಂಡಗಳ ಪ್ರಕಾರ, ಬಾಕಿ ಉಳಿದಿರುವ ಅನುಮೋದಿತ ಇನ್‌ಪುಟ್ ಸಬ್ಸಿ ಡಿಯನ್ನು, ಅನ್ವಯವಾಗುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟು, ಎನ್‌ಡಿಆರ್‌ಎಫ್‌ನಿಂದ ಅಗತ್ಯ ಅನುದಾನವು ದೊರೆತ ತಕ್ಷಣವೇ ಒಂದೇ ಕಂತಿನಲ್ಲಿ ಬಿಡುಗಡೆ ಮಾಡಲಾಗುತ್ತದೆ. ನಮ್ಮ ಬದುಕಿನ ಅನುಭವದಲ್ಲಿ ಇಷ್ಟು ದೊಡ್ಡ ಭೀಕರ ಬರಗಾಲ ನಾವು ಯಾರೂ ಕೇಳಿಲ್ಲ. ಕೇಂದ್ರ ಸರ್ಕಾರ ಮುನ್ಸೂಚನೆ ಕೊಟ್ಟರೂ ಕೂಡ ಕೃಷ್ಣಾ ಬಿಟ್ಟು ಬೇರೆ ಯಾವ ಅಣೆಕಟ್ಟು ತುಂಬಿಲ್ಲ ಎಂದು ತಿಳಿಸಿದರು.

ಕಾನೂನಿನ ಚೌಕಟ್ಟಿನಲ್ಲಿಯೇ ಬರಪೀಡಿತ ತಾಲ್ಲೂಕುಗಳ ಘೋಷಣೆ: ಜಂಟಿ ಬೆಳೆ ಹಾನಿ ಮೌಲ್ಯಮಾಪನ ವರದಿಯ ಪ್ರಕಾರ ರಾಜ್ಯದಲ್ಲಿ 57.93 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆ ಹಾನಿಯಾಗಿದೆ. ಈ ವಿಪತ್ತಿನಿಂದ ರೈತರು ಕಂಗೆಟ್ಟಿದ್ದಾರೆ. 226 ತಾಲೂಕುಗಳು ಬರಪೀಡಿತ ಎಂದು ಘೋಷಣೆ ಮಾಡುವಾಗ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಯಾರ ಒತ್ತಡಕ್ಕೂ ಮಣಿಯದೆ ನೇರವಾಗಿ ಪರಿಶೀಲಿಸಿ ವರದಿ ತಯಾರಿಸಲಾಗಿದೆ. ಕಾನೂನು ಪ್ರಕಾರವೇ ಕಂದಾಯ ಸಚಿವರು, ಡಿಸಿಎಂ ಅವರ ಅನುಮೋದನೆ ಪಡೆದು ನಾನು ಬರಪೀಡಿತ ತಾಲೂಕುಗಳ ಘೋಷಣೆ ಮಾಡಿದ್ದೇನೆ ಎಂದು ಹೇಳಿದರು.

ವಿಪಕ್ಷಗಳಿಗೆ ರಾಜಕಾರಣ ಮುಖ್ಯ: ಕೇಂದ್ರ ಸರ್ಕಾರ ಕಳುಹಿಸಿದ್ದ ಮೂರು ತಂಡಗಳೂ ರಾಜ್ಯದ ಬರ ಪೀಡಿತ ಪ್ರದೇಶಗಳನ್ನು ಭೇಟಿ ಮಾಡಿವೆ. ನಾವು ಕೂಡ ವಿಪಕ್ಷಗಳೊಂದಿಗೆ ಚರ್ಚೆ ಮಾಡಬೇಕೆಂದರೂ ಅವರಿಗೆ ರಾಜಕಾರಣ ಮುಖ್ಯವಾಯಿತು. ರೈತರ ಹಿತ ಕಾಪಾಡಲು ಮೂರು ವಿಭಾಗಗಳಿಗೆ ಭೇಟಿ ಮಾಡಿ ಶಕ್ತಿ ತುಂಬುವ ಕೆಲಸ ಮಾಡಿದ್ದೇವೆ ಎಂದರು.

ರೈತರ ನೆರವಿಗೆ ಧಾವಿಸಬೇಕಾದ್ದು ಕೇಂದ್ರದ ಕರ್ತವ್ಯ: ಬರಗಾಲದಿಂದಾಗಿ ರಾಜ್ಯದಲ್ಲಿ 62 ಸಾವಿರ ಕೋಟಿ ರೂ. ನಷ್ಟವಾಗಿದೆ ಎಂದು ಕೇಂದ್ರ ಸರ್ಕಾರಕ್ಕೆ ವರದಿ ಕಳುಹಿಸಲಾಗಿದೆ. ರೈತರ ನೆರವಿಗೆ ಧಾವಿಸಬೇಕಾದ್ದು ಕೇಂದ್ರದ ಕರ್ತವ್ಯ. ರೈತರಿಗೆ ಬೆಳೆ ಪರಿಹಾರವಾಗಿ 2 ಸಾವಿರ ರೂ. ಒದಗಿಸುವುದಾಗಿ ವಿಧಾನಸಭೆಯಲ್ಲಿ ಘೋಷಣೆ ಮಾಡಿದ್ದು, ಕೇಂದ್ರದಿಂದ 22,400 ಕೋಟಿ ಪರಿಹಾರ ಒದಗಿಸಲು ಕೋರಲಾಗಿದೆ. ಈ ಸಂಬಂಧ ಪ್ರಧಾನಿಗಳನ್ನು ಭೇಟಿ ಮಾಡಲು ಸಮಯ ಕೇಳಿದ್ದೇವೆ. ಸರ್ವಪಕ್ಷ ನಿಯೋಗ ಕರೆತರುವುದಾಗಿಯೂ ಹೇಳಿದ್ದೇವೆ. ಸರ್ವಪಕ್ಷವರನ್ನು ನಮ್ಮ ಜೊತೆ ಬಂದು ಕೇಂದ್ರದ ಮೇಲೆ ಒತ್ತಡ ಹಾಕಲೂ ಕೂಡ ಕೇಳಿದ್ದೇವೆ. ಅವರು ಮುಂದೇನು ಮಾಡುತ್ತಾರೆ ತಿಳಿದಿಲ್ಲ ಎಂದು ಹೇಳಿದರು.

57 ಲಕ್ಷ ಹೆಕ್ಟೇರ್ ಬೆಳೆ ನಾಶವಾಗಿದ್ದು, ರೈತರಿಗೆ ನಷ್ಟವಾಗಿದೆ. ರಾಜಸ್ಥಾನ ಬಿಟ್ಟರೆ ದೇಶದಲ್ಲಿ ಅತಿ ಹೆಚ್ಚು ಒಣ ಭೂಮಿ ಇರುವ ಪ್ರದೇಶ ಕರ್ನಾಟಕ. ರಾಜ್ಯದಲ್ಲಿ ಕುಡಿಯುವ ನೀರಿಗೆ ಸಹ ತೊಂದರೆಯಾಗಿದೆ. ರೈತರಿಗೆ 20 ಸಾವಿರ ಕೋಟಿ ರೂ.ಗಳನ್ನು ಉಚಿತ ವಿದ್ಯುತ್‌ಗಾಗಿ ನೀಡಲಾಗುತ್ತಿತ್ತು. ಬರಗಾಲದಿಂದಾಗಿ ವಿದ್ಯುತ್ ಬಳಕೆ ಹೆಚ್ಚಾಗಿ ಈಗ 30 ಸಾವಿರ ಕೋಟಿ ನೀಡುವ ಅನಿವಾರ್ಯತೆ ಒದಗಿದೆ. ಹಣ ಕೊಟ್ಟರೂ ವಿದ್ಯುತ್ ದೊರಕದ ಪರಿಸ್ಥಿತಿ ಎದುರಾಗಿದೆ ಎಂದು ಸಿಎಂ ವಿವರಿಸಿದರು.

ಎಸ್‌ಐಆರ್ ವಿರೋಧಿಸಿ ಕಾಂಗ್ರೆಸ್‌ನಿಂದ 'ವೋಟ್ ಬಚಾವೋ, ದೇಶ್ ಬಚಾವೋ' ಬೃಹತ್ ಧರಣಿ

ಉದ್ಯೋಗ ಹಾಗೂ ದೇಶದ ಜನರ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರಕ್ಕೆ ಕಾಳಜಿ ಇಲ್ಲ:ಎನ್ ಎಸ್ ಬೋಸೆರಾಜು





ರಾಯಚೂರು, ನ. 5–

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ವಿರೋಧಿಸಿ, ಪ್ರಜಾಪ್ರಭುತ್ವ ಮತ್ತು ಸಂವಿಧಾನಬದ್ಧ ಮತದಾನದ ಹಕ್ಕಿನ ರಕ್ಷಣೆಗಾಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಗುರುವಾರ 'ವೋಟ್ ಬಚಾವೋ, ದೇಶ್ ಬಚಾವೋ' ಘೋಷವಾಕ್ಯದಡಿ ಪ್ರತಿಭಟನಾ ಧರಣಿ ನಡೆಸಲಾಯಿತು.


ಜಿಲ್ಲಾ ಕಾಂಗ್ರೆಸ್ ಸಮಿತಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪಕ್ಷದ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು, ಮುಂಖಡರು, ಹಾಗೂ ಕಾರ್ಯಕರ್ತರು ಪಾಲ್ಗೊಂಡು ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಎಸ್‌ಐಆರ್ ಪ್ರಕ್ರಿಯೆಯ ಹೆಸರಿನಲ್ಲಿ ದೇಶದಾದ್ಯಂತ ಸುಮಾರು 13 ಕೋಟಿ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದು

3ನೇಯ ಪುಟಕ್ಕೆ

ಎಸ್ ಟಿ ಸಮುದಾಯದ ಚಾಲಕನಿಗೆ ಜಾತಿ ನಿಂದನೆ ಆರೋಪ; ಎಇಇ ವಿರುದ್ದ ದೂರು

ರಾಯಚೂರು: ಪರಿಶಿಷ್ಟ ಪಂಗಡದ ಹೊರ ಗುತ್ತಿಗೆ ನೌಕರ(ಕಾರು ಚಾಲಕ) ನಿಗೆ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ದೇವದುರ್ಗ ಉಪ ವಿಭಾಗದ ಎಇಇ ಜಾತಿ ನಿಂದನೆ ಮಾಡಿ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ಸಲ್ಲಿಸಿರುವ ಬಗ್ಗೆ ವರದಿಯಾಗಿದೆ.



ಎಇಇ ಹೀರಾಲಾಲ್ ಅವರ ವಿರುದ್ಧ ಕಾರು ಚಾಲಕರಾಗಿರುವ ಶಂಕರ ನಾಯಕ ಅವರು ದೂರು ನೀಡಿದ್ದಾರೆ ಎನ್ನಲಾಗಿದೆ. ನವೆಂಬರ್ 1 ಕನ್ನಡ ರಾಜ್ಯೋತ್ಸವದ ದಿನದಂದು ಧ್ವಜಾರೋಹಣದ ವೇಳೆ 10 ನಿಮಿಷ ತಡವಾಗಿ ಬಂದಿದ್ದಾರೆ ಎಂದು ಆಕ್ರೋಶಗೊಂಡು ಜಾತಿ ನಿಂದನೆ ಮಾಡಿ ಬೆದರಿಕೆ ಹಾಕಿದ್ದಾರೆ ಎಂದು ಚಾಲಕ ದೂರಿನಲ್ಲಿ ಆರೋಪಿಸಿದ್ದಾರೆ.

ಕಳೆದ 5 ವರ್ಷಗಳಿಂದ ಶಂಕರ್ ನಾಯಕ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ದೇವದುರ್ಗ ಉಪ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದು, ಕನ್ನಡ ರಾಜ್ಯೋತ್ಸವದ ದಿನ ಧ್ವಜಾರೋಹಣ ಕಾರ್ಯಕ್ರಮ ಇರುವುದರಿಂದ ಎಇಇ ಬೆಳಿಗ್ಗೆ 8 ಗಂಟೆಗೆ ಮನೆ ಕಡೆಗೆ ಬರಲು ಹೇಳಿದ್ದಾರೆ. 7 ಗಂಟೆಗೆ ಎಂದು ಚಾಲಕ ಹೇಳಿದಾಗ ನಾನು ಹೇಳಿದಷ್ಟು ಮಾಡು ಎಂದು 8ಗಂಟೆಗೆ ಕ್ಕೆ ಬರಲು ಹೇಳಿದ್ದಾರೆ. ಆದರೆ ಚಾಲಕ 10 ನಿಮಿಷ ತಡವಾಗಿ ಬಂದಿದ್ದಕ್ಕಾಗಿ ಅವಾಚ್ಯವಾಗಿ ಮಾತನಾಡಿ, ಜಾತಿನಿಂದನೆ ಮಾಡಿದಲ್ಲದೇ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಅಟ್ರಾಸಿಟಿ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕು, ಬೆದರಿಕೆ ಹಾಕಿದ್ದು ಅವರ ಮನೆಯೆ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು ಅದನ್ನು ಸಾಕ್ಷಿಯಾಗಿ ಪರಿಗಣಿಸಿ ಕ್ರಮ ಕೈಗೊಳ್ಳಬೇಕು ಎಂದು ದೂರಿನಲ್ಲಿ ಆಗ್ರಹಿಸಿದ್ದಾರೆ.

ಗ್ರಾಮಗಳಲ್ಲಿ ಶಾಂತಿ, ಸೌಹಾರ್ದ ಕಾಪಾಡಿ; ಶಿಕ್ಷಣ ಮತ್ತು ಸರ್ಕಾರಿ ಸೌಲಭ್ಯಗಳನ್ನು ಪಡೆದು ಅಭಿವೃದ್ಧಿಯತ್ತ ಸಾಗಬೇಕು: ಎಸ್ಪಿ...

ರಾಯಚೂರು: ಗ್ರಾಮೀಣ ಪ್ರದೇಶಗಳಲ್ಲಿ ಜಾತಿ, ಧರ್ಮ, ಭಾಷೆ ಹಾಗೂ ವರ್ಗಗಳ ಹೆಸರಿನಲ್ಲಿ ಯಾವುದೇ ಭೇದಭಾವ ಮಾಡದೆ ಎಲ್ಲ ಸಮುದಾಯದ ಜನರು ಸಹೋದರರಂತೆ ಬಾಳಬೇಕು. ಗ್ರಾಮಗಳಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮಾಜಿಕ ಸಾಮರಸ್ಯ ಕಾಪಾಡುವ ಮೂಲಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ, ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆದುಕೊಂಡು ಅಭಿವೃದ್ಧಿಯತ್ತ ಸಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಕರೆ ನೀಡಿದ್ದಾರೆ.

ರಾಯಚೂರು ತಾಲೂಕಿನ ಆತಕೂರು ಗ್ರಾಮದಲ್ಲಿ ತಾಲೂಕು ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಸಮಿತಿಯ ವತಿಯಿಂದ ಗ್ರಾಮಸ್ಥರು ಹಾಗೂ ದಲಿತ ಸಮುದಾಯದ ಮುಖಂಡರೊಂದಿಗೆ ಆಯೋಜಿಸಿದ್ದ ಸಮನ್ವಯ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಜಿಲ್ಲಾಧಿಕಾರಿಯ ನಿರ್ದೇಶನದಂತೆ ಜಿಲ್ಲೆಯ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಗ್ರಾಮಗಳಲ್ಲಿ ಇಂತಹ ಸಮನ್ವಯ ಸಭೆಗಳನ್ನು ಆಯೋಜಿಸಲಾಗುತ್ತಿದೆ. ಪೊಲೀಸ್ ಇಲಾಖೆಯ ಮಾಹಿತಿ ಪ್ರಕಾರ ಆತಕೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ನಡುವೆ ಪ್ರಕರಣಗಳು ಹಾಗೂ ಪ್ರತಿದೂರುಗಳು ದಾಖಲಾಗುತ್ತಿರುವುದು ಕಂಡುಬಂದಿದೆ. ಇಂತಹ ಘಟನೆಗಳು ಮರುಕಳಿಸದಂತೆ ಎಲ್ಲರೂ ಪರಸ್ಪರ ಅರ್ಥ ಮಾಡಿಕೊಂಡು ಶಾಂತಿಯುತವಾಗಿ ಬದುಕಬೇಕು ಎಂದು ಮನವಿ ಮಾಡಿದರು.

ಬಸವಣ್ಣನವರ ವಚನವಾದ 'ಇವನಾರವ, ಇವನಾರವ, ಇವನಾರವ ಎಂದೆನಿಸದಿರಯ್ಯ, ಇವ ನಮ್ಮವ, ಇವ ನಮ್ಮವ ಎಂದೆನಿಸಯ್ಯ' ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದಲ್ಲಿ ಎಲ್ಲರೂ ಒಂದೇ ಎಂಬ ಭಾವನೆಯಿಂದ ಪರಸ್ಪರ ಗೌರವದಿಂದ ನಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾನೂನು ಅರಿವು ಮೂಡಿಸುವುದು ಸಭೆಯ ಉದ್ದೇಶ: ಹರೀಶ್

ಹೆಚ್ಚುವರಿ ಪೊಲೀಸ್ ಅಧೀಕ್ಷಕ ಹರೀಶ್ ಮಾತನಾಡಿ, ಜಿಲ್ಲಾಧಿಕಾರಿಯ ಆದೇಶದಂತೆ ಪ್ರತೀ ತಿಂಗಳು ಮೊದಲ ವಾರದ ಬುಧವಾರ ಗ್ರಾಮ

3ನೇಯ ಪುಟಕ್ಕೆ

ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ ರೂ.100 ಕೋಟಿಗೂ ಅಧಿಕ ಹಣ ಖರ್ಚು; ಕೆರೆ ಮಾತ್ರ ಕೊಳಚೆಗುಂಡಿ: ರಾಮನಗೌಡ ಏಗನೂರು ಆಕ್ರೋಶ

15 ವರ್ಷಗಳಿಂದ ಅಭಿವೃದ್ಧಿ ಹೆಸರಿನಲ್ಲಿ ಅನುದಾನ ಲೂಟಿ ಆರೋಪ







ರಾಯಚೂರು, ನ. 5–

ನಗರದ ಅತ್ಯಂತ ಪುರಾತನ ಕೆರೆಗಳಲ್ಲಿ ಒಂದಾದ ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ ಕಳೆದ 15 ವರ್ಷಗಳಿಂದ ಕೋಟ್ಯಂತರ ರೂಪಾಯಿ ಅನುದಾನ ಖರ್ಚು ಮಾಡಲಾಗಿದ್ದರೂ, ಕೆರೆಯ ಸ್ಥಿತಿ ಮಾತ್ರ ಸುಧಾರಿಸಿಲ್ಲ. ಅಭಿವೃದ್ಧಿಯ ಹೆಸರಿನಲ್ಲಿ ಹಣ ಖರ್ಚು ಮಾಡಲಾಗಿದೆ ಎಂದು ಹೇಳುವ ಅಧಿಕಾರಿಗಳು, ಒಮ್ಮೆ ಕೆರೆಯ ವಾಸ್ತವ ಸ್ಥಿತಿಯನ್ನು ಕಣ್ಣಾರೆ ನೋಡಬೇಕು. ಸುಮಾರು ರೂ. 100 ಕೋಟಿಗೂ ಅಧಿಕ ಅನುದಾನ ವ್ಯಯಿಸಿ 'ವುದಾಗಿ ಹೇಳಲಾಗುತ್ತಿದ್ದರೂ, ಕೆರೆ ಕೊಳಚೆಗುಂಡಿಯಾಗಿ ಮಾರ್ಪಟ್ಟಿದೆ ಎಂದು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಗಂಭೀರ ಆರೋಪ ಮಾಡಿದರು.

ನಗರದ ಮಾವಿನಕೆರೆ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಿಸಿದ ಅವರು, ಕೆರೆಯ ಒತ್ತುವರಿ, ಕೊಳಚೆ ನೀರಿನ ಸೇರ್ಪಡೆ, ಅಪೂರ್ಣ ಕಾಮಗಾರಿಗಳು ಹಾಗೂ ಅನುದಾನದ ಬಳಕೆಯ ಕುರಿತು ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಮಾವಿನಕೆರೆ ಅಭಿವೃದ್ಧಿ ಎಂದರೆ ಕೆರೆಯನ್ನು ಸಂರಕ್ಷಿಸಿ, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವುದಾಗಿದೆ. ಆದರೆ,

3ನೇಯ ಪುಟಕ್ಕೆ

ದಿ.8 ರಂದು ಬೃಹತ್ ಬೈಕ್ ರ‍್ಯಾಲಿ-ಬಹಿರಂಗ ಸಭೆ

ರಾಯಚೂರು, ನ. 5–

ಸಿಂಧನೂರು ತಾಲ್ಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲೆ ನಡೆದ ಹಲ್ಲೆ ಹಾಗೂ ಸಾಮಾಜಿಕ ಬಹಿಷ್ಕಾರವನ್ನು ಖಂಡಿಸಿ ನವೆಂಬರ್ 8ರಂದು ಬೃಹತ್ ಬೈಕ್ ರ‍್ಯಾಲಿ ಮತ್ತು ಬಹಿರಂಗ ಸಭೆ ಹಮ್ಮಿಕೊಳ್ಳಲಾಗಿದೆ. ರ‍್ಯಾಲಿಗೆ ಪೊಲೀಸ್ ಇಲಾಖೆ ಅನುಮತಿ ನಿರಾಕರಿಸಿದರೂ ಬೇರೆ ಸ್ಥಳದಲ್ಲಾದರೂ ರ‍್ಯಾಲಿ ನಡೆಸಿಯೇ ತೀರುತ್ತೇವೆ ಎಂದು ದಲಿತ ಪರ ಹೋರಾಟಗಾರ ಎಸ್. ಮಾರೆಪ್ಪ ಎಚ್ಚರಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತಿಡಿಗೋಳ ಗ್ರಾಮದಲ್ಲಿ ಮೇಲ್ವರ್ಗದವರು ದಲಿತರ ಮೇಲೆ ದೌರ್ಜನ್ಯ ನಡೆಸಿ ಭಯದ ವಾತಾವರಣ ಸೃಷ್ಟಿಸಿದ್ದಾರೆ. ಘಟನೆಯಿಂದಾಗಿ ನೂರಾರು ದಲಿತರು ಗ್ರಾಮ ತೊರೆದು ಬೇರೆ ಊರುಗಳಿಗೆ ತೆರಳಿದ್ದಾರೆ. ಸಂತ್ರಸ್ತರ ಪರವಾಗಿ ನಿಲ್ಲುವವರು ಯಾರು ಎಂಬ ಪ್ರಶ್ನೆ ಎದುರಾಗಿದೆ. ಸಿಂಧನೂರು ಹಾಗೂ ಮಸ್ಕಿ ಕ್ಷೇತ್ರದ ಶಾಸಕರು ಇದುವರೆಗೂ ಗ್ರಾಮಕ್ಕೆ ಭೇಟಿ ನೀಡಿ ಸಂತ್ರಸ್ತರಿಗೆ ಸಾಂತ್ವನ ಹೇಳಿಲ್ಲ. ಸಮರ್ಪಕವಾಗಿ ಸ್ಪಂದಿಸಿಲ್ಲ ಎಂದು ಆರೋಪಿಸಿದರು.


ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ತಿಳಿಗೊಳಿಸುವ ಪ್ರಯತ್ನ ಮಾಡಿರುವುದಕ್ಕೆ ಧನ್ಯವಾದ ಸಲ್ಲಿಸುತ್ತೇವೆ. ಆದರೆ ಗ್ರಾಮ ತೊರೆದಿರುವ ದಲಿತ ಕುಟುಂಬಗಳಿಗೆ ಧೈರ್ಯ ತುಂಬುವವರು ಯಾರು? ಅವರ ರಕ್ಷಣೆಯ ಹೊಣೆ ಯಾರು ಹೊರುತ್ತಾರೆ? ನಮ್ಮ ರಕ್ಷಣೆಗಾಗಿ ನಾವು ಹೋರಾಟ ಮಾಡುತ್ತಿದ್ದೇವೆ. ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸುತ್ತೇವೆ. ಅನುಮತಿ ನೀಡದಿದ್ದರೂ ರ‍್ಯಾಲಿ ನಡೆಸಿಯೇ ತೀರುತ್ತೇವೆ ಎಂದು ಹೇಳಿದರು.

ಆರೋಪಿಗಳ ಪರವಾಗಿ ಪೊಲೀಸ್

3ನೇಯ ಪುಟಕ್ಕೆ

ನ.16ರಿಂದ 51 ದಿನಗಳ ಕಾಲ ಅಯ್ಯಪ್ಪ ಭಕ್ತರಿಗೆ ಅನ್ನದಾಸೋಹ:ಡಿ.ವೀರೇಶ್ ಕುಮಾರ್

ರಾಯಚೂರು: ಕಾರ್ತಿಕ ಹಾಗೂ ಧನುರ್ಮಾಸದ ಪ್ರಯುಕ್ತ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನ ಸಮಿತಿ ವತಿಯಿಂದ ನ.16ರಿಂದ 2027ರ ಜ.5ರವರೆಗೆ 51 ದಿನಗಳ ಕಾಲ ಅನ್ನದಾಸೋಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಉಪಾಧ್ಯಕ್ಷ ಡಿ.ವೀರೇಶ್ ಕುಮಾರ್ ತಿಳಿಸಿದರು.



ನಗರದ ಉದಯನಗರದಲ್ಲಿರುವ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ಮಂಡಲ ವ್ರತಾಚರಣೆ ಅಂಗವಾಗಿ ಭಕ್ತರಿಗೆ ಅನ್ನದಾಸೋಹ ಏರ್ಪಡಿಸಲಾಗಿದೆ. ಪ್ರತಿದಿನ ಮಧ್ಯಾಹ್ನ 1ರಿಂದ 3 ಗಂಟೆಯವರೆಗೆ ಅನ್ನದಾಸೋಹ ನಡೆಯಲಿದ್ದು, ರಾಯಚೂರು ಜಿಲ್ಲೆಯ ಅಯ್ಯಪ್ಪ ಸ್ವಾಮಿ ಭಕ್ತರು ಪ್ರಸಾದ ಸ್ವೀಕರಿಸಬೇಕು ಎಂದು ಅವರು ಸುದ್ದಿಗೋಷ್ಠಿಯಲ್ಲಿ ಮನವಿ ಮಾಡಿದರು.

ದೇವಸ್ಥಾನದಲ್ಲಿ ಪ್ರತಿ ಶನಿವಾರ ಸಂಜೆ 7ರಿಂದ ರಾತ್ರಿ 10 ಗಂಟೆಯವರೆಗೆ ಭಜನೆ, ಪಡಿಪೂಜೆ, ರಥೋತ್ಸವ ಹಾಗೂ ಪ್ರಸಾದ ವಿತರಣೆ ಕಾರ್ಯಕ್ರಮಗಳು ನಡೆಯಲಿವೆ. ಪ್ರತಿ ತಿಂಗಳ ಅಮಾವಾಸ್ಯೆಯಂದು ಭಜನೆ, ಪಡಿಪೂಜೆ ಮತ್ತು ರಥೋತ್ಸವದ ಅಂಗವಾಗಿ ಸುಮಾರು 500 ಭಕ್ತರಿಗೆ ಅನ್ನದಾನ ಮಾಡಲಾಗುತ್ತದೆ ಎಂದು ತಿಳಿಸಿದರು.

1992ರಲ್ಲಿ ಆರಂಭವಾದ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನವು 2026ಕ್ಕೆ 34 ವರ್ಷಗಳನ್ನು ಪೂರೈಸಿದೆ. ಈ ಅವಧಿಯಲ್ಲಿ ಪ್ರತಿವರ್ಷ ಮಂಡಲ ಪೂಜೆ, ದೇವಸ್ಥಾನದ ಪುಷ್ಪಾಲಂಕಾರ, ಮಂಡಲ ಪಡಿಪೂಜೆ, ನವಗ್ರಹ ಮತ್ತು ಗಣಪತಿ ಹೋಮ, ಅಯ್ಯಪ್ಪ ಸ್ವಾಮಿ ಲಕ್ಷಾರ್ಚನೆ, ಚಂಡಿಮೇಳ, ನೃತ್ಯ, ಸಂಗೀತ ಹಾಗೂ ಭಜನೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅಲ್ಲದೆ, ಶ್ರೀ ಅಯ್ಯಪ್ಪ ಸ್ವಾಮಿ ದೇವರ ಮೆರವಣಿಗೆ ಮತ್ತು ಅನ್ನದಾನ ಕಾರ್ಯಕ್ರಮಗಳಲ್ಲಿ ಸುಮಾರು 3ರಿಂದ 4 ಸಾವಿರ ಭಕ್ತರು ಭಾಗವಹಿಸುತ್ತಾರೆ. ಮಕರ ಸಂಕ್ರಮಣದಂದು ಜ್ಯೋತಿ ದರ್ಶನದ ನಂತರ ಪಡಿಪೂಜೆ ನೆರವೇರಿಸಲಾಗುತ್ತದೆ ಎಂದರು.

ಈ ಎಲ್ಲ ಧಾರ್ಮಿಕ ಕಾರ್ಯಕ್ರಮಗಳು ಅಯ್ಯಪ್ಪಸ್ವಾಮಿ ಭಕ್ತರು, ಪೀಠದ ಗುರುಸ್ವಾಮಿಗಳು ಹಾಗೂ ದಾನಿಗಳ ಸಹಕಾರದಿಂದ ನಡೆಯುತ್ತಿವೆ ಎಂದು ಡಿ.ವೀರೇಶ್ ಕುಮಾರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ವಿ.ಎಂ.ದಾಸ್, ಕಾರ್ಯದರ್ಶಿ ದಾಮೋದರ್ ಪ್ರಭು, ಜಂಟಿ ಕಾರ್ಯದರ್ಶಿ ಕೇಶವರೆಡ್ಡಿ, ಸಂಚಾಲಕ ಪಿ.ಯಲ್ಲಪ್ಪ, ಉಪಾಧ್ಯಕ್ಷ ಆರ್.ನಾಗರಾಜ್, ಸದಸ್ಯ ಎಲ್.ಕರುಣಾಕರ ರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ವರದಿ ವಾರದೊಳಗೆ ಸಲ್ಲಿಸಿ : ಪಿ.ಟಿ.ಪರಮೇಶ್ವರ್ ನಾಯಕ

ಬೀದರ್

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಕುರಿತು ನಡೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳು ಹಾಗೂ ನೀಡಿದ ಸಲಹೆ-ಸೂಚನೆಗಳ ಆಧಾರದಲ್ಲಿ ಅರ್ಹ ಫಲಾನುಭವಿಗಳಿಗೆ ಯೋಜನೆಗಳು ಸಮರ್ಪಕವಾಗಿ ತಲುಪಿರುವ ಕುರಿತು ಮತ್ತು ಕೈಗೊಂಡ ಕ್ರಮಗಳ ಬಗ್ಗೆ ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ್ ನಾಯಕ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಕುರಿತು ಅಧಿಕಾರಿಗಳು ಮಾಹಿತಿ ನೀಡಬೇಕು. ಅಲ್ಲದೆ, ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ನೀಡುವಂತೆ ಸೂಚಿಸಿದರು.

ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಕಂಡುಬರುವ ಸಮಸ್ಯೆಗಳನ್ನು ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯರು ಅಧಿಕಾರಿಗಳ ಗಮನಕ್ಕೆ ತಂದ ತಕ್ಷಣ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು ಎಂದು ಹೇಳಿದರು.



ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು 3,64,287 ಫಲಾನುಭವಿಗಳು ನೋಂದಣಿಯಾಗಿದ್ದು, ಪರಿಷ್ಕರಣೆ ಬಳಿಕ ಉಳಿದ 3,40,756 ಫಲಾನುಭವಿಗಳ ಖಾತೆಗಳಿಗೆ ಜುಲೈವರೆಗೆ ಒಟ್ಟು 2,111 ಕೋಟಿ 73 ಲಕ್ಷ ರೂ. ಜಮೆ ಮಾಡಲಾಗಿದೆ. ಬಾಕಿ ಇರುವ ಕಂತಿನ ಹಣವನ್ನೂ ಸಂಪನ್ಮೂಲ ಕ್ರೋಡೀಕರಿಸಿ ಹಂತ ಹಂತವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು ಎಂದು ತಿಳಿಸಿದರು.

ಬೀದರ್ ಜಿಲ್ಲೆಯಲ್ಲಿ ಒಟ್ಟು 18 ಲಕ್ಷ ಜನಸಂಖ್ಯೆಯಿದ್ದು, ಅದರಲ್ಲಿ ಗ್ಯಾರಂಟಿ ಯೋಜನೆಗಳಡಿ ಸುಮಾರು 13 ಲಕ್ಷ ಫಲಾನುಭವಿಗಳಿದ್ದಾರೆ. ಕಳೆದ ಆರು ತಿಂಗಳಲ್ಲಿ ಮೃತಪಟ್ಟ ಸುಮಾರು 7 ಸಾವಿರ ಜನರನ್ನು ಗುರುತಿಸಿ ಅವರ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ.

ವೈದ್ಯಕೀಯ ಹಿನ್ನೆಲೆ ಹೊಂದಿರುವ ಸುಮಾರು 100 ಜನರನ್ನು ಗುರುತಿಸಿ ಪಡಿತರ ಚೀಟಿಗಳನ್ನು ನೀಡಲಾಗಿದೆ. ಫಲಾನುಭವಿಗಳಿಗೆ ಕಡ್ಡಾಯವಾಗಿ ಪಡಿತರ ವಿತರಿಸಬೇಕು. ಪಡಿತರ ಪಡೆಯಲು ಅರ್ಹವಾಗಿರುವ ಕುಟುಂಬಗಳು ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಗೃಹಜ್ಯೋತಿ ಯೋಜನೆಯಡಿ ನಿಜವಾದ ಫಲಾನುಭವಿಗಳಿಗೆ ಮಾತ್ರ ಯೋಜನೆಯ ಸೌಲಭ್ಯ ದೊರೆಯುವಂತಾಗಬೇಕು. ತೆರಿಗೆ ಪಾವತಿಸುವವರನ್ನು ಹಾಗೂ ಹೊರ ಜಿಲ್ಲೆಗಳಿಂದ ಬಂದು ನೆಲೆಸಿರುವವರನ್ನು ಗುರುತಿಸಿ ಯೋಜನೆಯಿಂದ ಹೊರಗಿಡಬೇಕು. ನಿಖರವಾಗಿ ಸಮೀಕ್ಷೆ ನಡೆಸಿ ಯೋಜನೆಯಿಂದ ವಂಚಿತರಾದ ಅರ್ಹರನ್ನು ಗುರುತಿಸಿ ಅವರಿಗೆ ಸೌಲಭ್ಯ ದೊರೆಯುವಂತೆ ಮಾಡಬೇಕು. ಪರಿಷ್ಕರಣೆ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಈವರೆಗೆ 19.59 ಲಕ್ಷದಷ್ಟು ಮಹಿಳೆಯರು ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಪ್ರಯಾಣಿಸಿದ್ದಾರೆ. ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗಾಗಿ ವಿಶೇಷ ಹಾಲುಣಿಸುವ ಕೊಠಡಿ, ಕುಡಿಯುವ ಶುದ್ಧ ನೀರಿನ ವ್ಯವಸ್ಥೆ ಹಾಗೂ ಶೌಚಾಲಯಗಳ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಈ ಕುರಿತು ಸ್ಥಳೀಯ ಗ್ಯಾರಂಟಿ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯರ ನಿಯೋಗದೊಂದಿಗೆ ಬಸ್ ನಿಲ್ದಾಣಗಳಿಗೆ ಭೇಟಿ ನೀಡಿ, ಸ್ವಚ್ಛತೆ ಹಾಗೂ ಮೂಲಸೌಕರ್ಯಗಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ಕಾಲೇಜು ವಿದ್ಯಾರ್ಥಿಗಳು ಯುವನಿಧಿ ಯೋಜನೆಯ ಬಗ್ಗೆ ಹೆಚ್ಚಿನ ಆಸಕ್ತಿ ತೋರುತ್ತಿಲ್ಲ ಎಂಬುದು ಗಮನಕ್ಕೆ ಬಂದಿದೆ. ಅಧಿಕಾರಿಗಳು ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳಿಗೆ ಭೇಟಿ ನೀಡಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಯುವಜನರಲ್ಲಿ ಯೋಜನೆಯ ಕುರಿತು ಅರಿವು ಮೂಡಿಸಿ, ಕರಪತ್ರಗಳ ಮೂಲಕ ಮಾಹಿತಿ ನೀಡಿ ಅರ್ಹರು ಸೌಲಭ್ಯ ಪಡೆದುಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಬೀದರ್ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಮೃತರಾವ್ ಚಿಮಕೋಡ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಾಧವರಾವ್ ಗಿತ್ತೆ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಸದಸ್ಯರು ಮತ್ತು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



7 ಕೋಟಿ ರೂ. ವೆಚ್ಚದ ಬಿಟಿ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ರಹೀಂ ಖಾನ್ ಚಾಲನೆ

ಬೀದರ್

ವ'ುುಖ್ಯವ'ುಂತ್ರಿಗ'ಳ' ಮೂಲಸೌಕರ್ಯ ಅಭಿವೃದ್ಧಿ ಯೋಜನೆ (ಸಿಎಂಐಡಿಪಿ) ಅಡಿಯಲ್ಲಿ ಮಂಜೂರಾಗಿರುವ ಒಟ್ಟು 37.50 ಕೋಟಿ ರೂ. ಮೊತ್ತದ ಅಭಿವೃದ್ಧಿ ಪ್ಯಾಕೇಜ್‌ನ ಭಾಗವಾಗಿ, 7 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನಗರದ ಬೀದ್ರಿ ಚೌಕ್‌ನಿಂದ ಕುಂಬಾರವಾಡ ಕಮಾನ್‌ವರೆಗೆ ನಿರ್ಮಾಣಗೊಳ್ಳಲಿರುವ ಬಿಟಿ ರಸ್ತೆ ಕಾಮಗಾರಿಗೆ ಶಾಸಕ ರಹೀಂ ಖಾನ್ ಅವರು ಬುಧವಾರ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬೀದರ್ ನಗರದ ವಿವಿಧ ಭಾಗಗಳಲ್ಲಿ ಈಗಾಗಲೇ ಸುಮಾರು 100 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು. ಇದಲ್ಲದೆ, ಮುಂದಿನ ದಿನಗಳಲ್ಲಿ ಬೀದರ್ ನಗರಸಭೆ ಅಥವಾ ಮಹಾನಗರ ಪಾಲಿಕೆಯ ಮೂಲಕ ಸುಮಾರು 200 ಕೋಟಿ ರೂ. ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಯೋಜನೆಯಿದೆ. ನಗರದ ರಸ್ತೆ ಸಂಪರ್ಕ, ಮೂಲಸೌಕರ್ಯ ಹಾಗೂ ನಾಗರಿಕ ಸೌಲಭ್ಯಗಳ ಸುಧಾರಣೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯನಿವಾ ರ್ಹಕ ಎಂಜಿನಿಯರ್ ಶಿವಶಂಕರ್ ಕಾಮಶೆಟ್ಟಿ, ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಶ್ರೀಕಾಂತ್ ಚಿಮಕೋಡೆ, ಸಹಾಯಕ ಅಭಿಯಂತರರು, ಗುತ್ತಿಗೆದಾರ ಸಚಿನ್ ಕೊಳ್ಳೂರು, ಮಹಾನಗರ ಪಾಲಿಕೆ ಸದಸ್ಯ ನವಾಜ್ ಖಾನ್, ಧನರಾಜ್ ಹಂಗರಗಿ, ಮೋಹನ್ ಕಾಳೇಕ ರ್, ಪ್ರಶಾಂತ್ ದೊಡ್ಡಿ, ಶೌಕತ್ ಅಲಿ, ಕಾಂಗ್ರೆಸ್ ಮುಖಂಡರಾದ ಇಸಾಕ್ ಸೆರಿಕಾರ್ ಅಮ್ಜದ್ ಅಲಿ ಹಾಗೂ ಇಮ್ರಾನ್ ಲಾಲವಾಡಿ ಸೇರಿ ಇತರರು ಉಪಸ್ಥಿತರಿದ್ದರು.



ಬಗದಲ್ ಗ್ರಾಮಕ್ಕೆ ಜಿಪಂ ಸಿಇಒ ಭೇಟಿ: ವಿವಿಧ ಯೋಜನೆ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ

ಬೀದರ್

ಬೆಳಗಿನ ನಡೆ ಗ್ರಾಮಗಳ ಕಡೆ ಕಾರ್ಯಕ್ರಮದಡಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್ ಅವರು ಬುಧವಾರ ಬೀದರ್ ತಾಲೂಕಿನ ಬಗದಲ್ ಗ್ರಾಮಕ್ಕೆ ಭೇಟಿ ನೀಡಿ, ಗ್ರಾಮದ ಮೂಲಸೌಕರ್ಯಗಳ ಪರಿಶೀಲನೆ ನಡೆಸಿದರು.

ಈ ವೇಳೆ ಗ್ರಾಮಸ್ಥರು ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ತಮ್ಮ ಅಳಲು ತೋಡಿಕೊಂಡರು. ಇದಕ್ಕೆ ಸ್ಪಂದಿಸಿದ ಸಿಇಒ, ಗ್ರಾಮದ ನೀರಿನ ಸಮಸ್ಯೆಯನ್ನು ಆದಷ್ಟು ಬೇಗ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮದ ವಿವಿಧ ಓಣಿಗಳಲ್ಲಿ ಸಂಚರಿಸಿದ ಅವರು, ಚರಂಡಿ, ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆಯನ್ನು ಪರಿಶೀಲಿಸಿದರು. ಬಳಿಕ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ (ಪಿಎಚ್‌ಸಿ) ಭೇಟಿ ನೀಡಿ, ಆಸ್ಪತ್ರೆಯ ವಿವಿಧ ವಿಭಾಗಗಳಲ್ಲಿ ಸ್ವಚ್ಛತೆ ಸೇರಿದಂತೆ ಹಲವು ವ್ಯವಸ್ಥೆಗಳನ್ನು ತಪಾಸಣೆ ನಡೆಸಿದರು.

ರೋಗಿಗಳಿಗೆ ವಿತರಿಸುವ ಮಾತ್ರೆಗಳು ಹಾಗೂ ಔಷಧಗಳ ದಾಸ್ತಾನು ಸಮರ್ಪಕವಾಗಿದೆಯೇ ಎಂಬುದನ್ನು ಫಾರ್ಮಸಿಯಲ್ಲಿ ಪರಿಶೀಲಿಸಿದರು. ನಂತರ ಪ್ರಯೋಗಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಪರೀಕ್ಷಾ ವ್ಯವಸ್ಥೆಗಳನ್ನು ವೀಕ್ಷಿಸಿದರು. ವೈದ್ಯರು ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗುತ್ತಿದ್ದಾರೆಯೇ ಎಂಬ ಬಗ್ಗೆಯೂ ಮಾಹಿತಿ ಪಡೆದರು.

ಗ್ರಾಮದಲ್ಲಿ ನಡೆಯುತ್ತಿರುವ ವಿಬಿ-ಜಿ ರಾಮ್ ಜಿ ಕಾಮಗಾರಿ ಸ್ಥಳಕ್ಕೂ ಭೇಟಿ ನೀಡಿದ ಅವರು, ಕಾಮಗಾರಿಯನ್ನು ವೀಕ್ಷಿಸುವುದಕ್ಕೆ ಮಾತ್ರ ಸೀಮಿತವಾಗದೆ, ಅಲ್ಲಿನ ಕಾರ್ಮಿಕರೊಂದಿಗೆ ತಾವೂ ಕೆಲಸದಲ್ಲಿ ತೊಡಗಿಸಿಕೊಂಡು ಶ್ರಮದಾನ ಮಾಡಿದರು. ಈ ಮೂಲಕ ಸಾರ್ವಜನಿಕರ ಗಮನ ಸೆಳೆದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್, ಸಹಾಯಕ ನಿರ್ದೇಶಕಿ ಲಕ್ಷ್ಮಿ ಬಿರಾದ ರ್, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಸಂಜುಕುಮಾರ್ ಟಿಸಿ ವಿಷ್ಣು ಕುಲಕರ್ಣಿ, ಟಿಎ ಜುನೇದ್ ವಿನಾಯಕ್, ಐಇಸಿ ಸಂಯೋಜಕ ಸತ್ಯಜೀತ್ ನೀಡೋದಿಕರ್ ಹಾಗೂ ಇತರರು ಉಪಸ್ಥಿತರಿದ್ದರು.

ಶಿಕ್ಷಣ ಸಂಸ್ಥೆಗಳು ಸಂಶೋಧನಾ ಚಟುವಟಿಕೆಗಳಿಗೆ ಆದ್ಯತೆ ನೀಡಲಿ: ಶಶೀಲ್ ಜಿ. ನಮೋಶಿ

ಕಲಬುರಗಿ:

ಶಿಕ್ಷಣ ಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹಾಗೂ ಅಂತರರಾಷ್ಟ್ರೀಯ ಗುಣಮಟ್ಟದ ಶಿಕ್ಷಣದ ಮಾನದಂಡಗಳನ್ನು ತಲುಪಲು ಶಿಕ್ಷಣ ಸಂಸ್ಥೆಗಳು ಸಂಶೋಧನಾ ಚಟುವಟಿಕೆಗಳು ಮತ್ತು ಸಂಶೋಧನಾ ಫಲಿತಾಂಶಗಳಿಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಪ್ರತಿಪಾದಿಸಿದರು.

ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾಮಂಟಪದಲ್ಲಿ ಬುಧವಾರ ಆಯೋಜಿಸಿದ್ದ ಭಾರತೀಯ ಎಲೆಕ್ಟ್ರಾನಿಕ್ಸ್ ಮತ್ತು ಟೆಲಿಕಮ್ಯುನಿಕೇಷನ್ಸ್ ಇಂಜಿನಿಯರಿಂಗ್ ಸಂಸ್ಥೆಯ (ಐಇಟಿಇ) 73ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ದಾಖಲೆಯ ಐದನೇ ಬಾರಿಗೆ ಕರ್ನಾಟಕ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ವತಿಯಿಂದ ಅವರನ್ನು ಸನ್ಮಾನಿಸಲಾಯಿತು.

ಶಿಕ್ಷಣ ಸಂಸ್ಥೆಗಳ ಶ್ರೇಯಾಂಕ ನಿರ್ಧರಿಸುವಲ್ಲಿ ಗುಣಮಟ್ಟದ ಸಂಶೋಧನಾ ಫಲಿತಾಂಶಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳು ಸಂಶೋಧನಾ ಚಟುವಟಿಕೆಗಳಿಗೆ ನೀಡುವ ಆದ್ಯತೆ ಪ್ರಮುಖ ಪಾತ್ರ ವಹಿಸುತ್ತವೆ ಎಂದು ನಮೋಶಿ ಹೇಳಿದರು.

ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜು ಸೇರಿದಂತೆ ಹಲವು ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿರುವ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರೂ ಆಗಿರುವ ನಮೋಶಿ, ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜಿನ 35 ಸಾವಿರ ಚದರ ಅಡಿ ಪ್ರದೇಶದಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಉದ್ಯಾನವನ (ಟೆಕ್ ಪಾರ್ಕ್) ಸ್ಥಾಪಿಸುವ ಪ್ರಸ್ತಾವನೆಗೆ ಅನುಮೋದನೆ ದೊರೆತಿದ್ದು, ಶೀಘ್ರದಲ್ಲಿಯೇ ಕಾಮಗಾರಿ ಆರಂಭವಾಗಲಿದೆ ಎಂದು ತಿಳಿಸಿದರು.

ಪ್ರಸ್ತಾವಿತ ಟೆಕ್ ಪಾರ್ಕ್ ವಿದ್ಯಾರ್ಥಿಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ತಮ್ಮ ಹೊಸ ಆಲೋಚನೆಗಳನ್ನು ಅನ್ವೇಷಿಸಲು ಮತ್ತು ರೂಪಿಸಿದ ಯೋಜನೆಗಳ ಮೇಲೆ ಕಾರ್ಯನಿರ್ವಹಿಸಲು ಉತ್ತಮ ವೇದಿಕೆ ಒದಗಿಸಲಿದೆ. ಆರಂಭದಲ್ಲಿ ಎಲ್ಲ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳಿಗೆ ಈ ಟೆಕ್ ಪಾರ್ಕ್‌ನ ಸೌಲಭ್ಯಗಳನ್ನು ಬಳಸಿಕೊಳ್ಳಲು ಅವಕಾಶ ನೀಡಲಾಗುವುದು. ನಂತರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳಿಗೂ ಅವಕಾಶ ಕಲ್ಪಿಸುವ ಕುರಿತು ಪರಿಶೀಲಿಸಲಾಗುವುದು ಎಂದು ವಿವರಿಸಿದರು.



ಸಂಶೋಧನಾ ಚಟುವಟಿಕೆಗಳನ್ನು ಉತ್ತೇಜಿಸಲು ಹಾಗೂ ಮೂಲಸೌಕರ್ಯ ಸೌಲಭ್ಯಗಳನ್ನು ಸುಧಾರಿಸಲು ಎಐಸಿಟಿಇ, ಯುಜಿಸಿ ಮತ್ತು ಇತರ ಕೇಂದ್ರ ಮಟ್ಟದ ಪ್ರಮುಖ ಸಂಸ್ಥೆಗಳಲ್ಲಿ ಲಭ್ಯವಿರುವ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಲು ಖಾಸಗಿ ಶಿಕ್ಷಣ ಸಂಸ್ಥೆಗಳು ಪರಸ್ಪರ ಕೈಜೋಡಿಸಬೇಕು ಎಂದು ನಮೋಶಿ ಅಭಿಪ್ರಾಯಪಟ್ಟರು. ಇಂತಹ ಅನುದಾನವನ್ನು ಬಳಸಿಕೊಳ್ಳುವಲ್ಲಿ ಕರ್ನಾಟಕ ಹಿಂದುಳಿದಿದ್ದು, ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಕೆಲವೇ ರಾಜ್ಯಗಳಲ್ಲಿ ಒಂದಾಗಿರುವ ತಮಿಳುನಾಡಿನ ಮಾದರಿಯನ್ನು ಕರ್ನಾಟಕ ಅನುಸರಿಸಬೇಕು ಎಂದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಶಿಕ್ಷಕ ಸಮುದಾಯವು ಅಪಾರ ಬೆಂಬಲ ನೀಡಿ ದಾಖಲೆಯ ಐದನೇ ಬಾರಿಗೆ ತಮ್ಮನ್ನು ಆಯ್ಕೆ ಮಾಡಿದ್ದಕ್ಕಾಗಿ ಕೃತಜ್ಞತೆ ಸಲ್ಲಿಸಿದ ಅವರು, ಖಾಸಗಿ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಆಯಾ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಬೇಡಿಕೆಗಳನ್ನು ಈಡೇರಿಸಲು ಆದ್ಯತೆ ನೀಡುವುದಾಗಿ ಭರವಸೆ ನೀಡಿದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ಚುನಾವಣೆಯಲ್ಲಿ ಯಶಸ್ಸು ಸಾಧಿಸಿದ ನಮೋಶಿ ಅವರನ್ನು ಅಭಿನಂದಿಸಿದರು. ಇದೇ ಸಂದರ್ಭದಲ್ಲಿ ನಮೋಶಿ ಅವರ ಅನುಭವ ಹಾಗೂ ಸೇವೆಯನ್ನು ಪರಿಗಣಿಸಿ, ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಲ್ಲಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಪಕ್ಷದ ವರಿಷ್ಠರನ್ನು ವೇದಿಕೆಯ ಮೂಲಕ ಒತ್ತಾಯಿಸಿದರು.

ಇತ್ತೀಚೆಗೆ ಐಇಟಿಇ ಸಂಸ್ಥೆಯ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಪ್ರೊ. ಬಸವರಾಜ ಗದಗೆ ಹಾಗೂ ನವದೆಹಲಿಯ ಐಇಟಿಇ ಆಡಳಿತ ಮಂಡಳಿಗೆ ಆಯ್ಕೆಯಾಗಿರುವ ವಿಟಿಯು ಕಲಬುರಗಿ ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕಿ ಡಾ. ಶುಭಾಂಗಿ ಅವರನ್ನು ಅವರ ಸಾಧನೆಗಾಗಿ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಡಾ. ಶುಭಾಂಗಿ ಅವರು 15ನೇ ಪ್ರೊ. ಎಸ್. ನಾರಾಯಣ ದತ್ತಿ ಉಪನ್ಯಾಸ ನೀಡಿದರು. ಪ್ರೊ. ಬಸವರಾಜ ಗದಗೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿಶ್ವವಿದ್ಯಾಲಯದ ಸಂಶೋಧನಾ ವಿಭಾಗದ ಡೀನ್ ಹಾಗೂ ಐಇಟಿಇ ಕಲಬುರಗಿ ಘಟಕದ ಅಧ್ಯಕ್ಷೆ ಡಾ. ಸುಜಾತಾ ಮಲ್ಲಾಪುರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್. ಶ್ರೀದೇವಿ ವಂದನಾರ್ಪಣೆ ಸಲ್ಲಿಸಿದರು.

ಅಂಗನವಾಡಿ ಕಾರ್ಯಕರ್ತೆಯರ ಸೇವೆ ಶ್ಲಾಘನೀಯ: ಶಾಸಕ ಪ್ರಭು ಚವ್ಹಾಣ

ಔರಾದ್:

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಸರ್ಕಾರದ ವಿವಿಧ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ತಮ್ಮ ಜವಾಬ್ದಾರಿಯನ್ನು ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸುವ ಮೂಲಕ ಮಕ್ಕಳ ಪೌಷ್ಟಿಕತೆ, ಮಹಿಳೆಯರ ಆರೋಗ್ಯ ಹಾಗೂ ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಇವರ ಸೇವೆ ಶ್ಲಾಘನೀಯ ಎಂದು ಶಾಸಕ ಪ್ರಭು ಚವ್ಹಾಣ ಹೇಳಿದರು.

ಪಟ್ಟಣದ ಡಾ. ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣ ಮಂಟಪದಲ್ಲಿ ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಸಂತಪೂರ ವತಿಯಿಂದ ಔರಾದ್ ಮತ್ತು ಕಮಲನಗರ ತಾಲ್ಲೂಕುಗಳ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಕುರಿತು ಆಯೋಜಿಸಿದ್ದ ಒಂದು ದಿನದ ಕಾರ್ಯಾಗಾರ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜನಗಣತಿ ಸೇರಿದಂತೆ ಸರ್ಕಾರದ ಎಲ್ಲ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅಂಗನವಾಡಿ ಕಾರ್ಯಕರ್ತೆಯರ ಸೇವೆ ಪಡೆಯಲಾಗುತ್ತದೆ. ಆದರೆ, ಅವರ ಕೆಲಸಕ್ಕೆ ಅನುಗುಣವಾಗಿ ಸಂಬಳ ದೊರೆಯುತ್ತಿಲ್ಲ. ಈ ವಿಚಾರವನ್ನು ಅಧಿವೇಶನದಲ್ಲಿಯೂ ಪ್ರಸ್ತಾಪಿಸಿ ಸರ್ಕಾರದ ಗಮನ ಸೆಳೆಯಲು ಪ್ರಯತ್ನಿಸಿದ್ದೇನೆ. ಸಂಬಳ ಹೆಚ್ಚಳ, ಆರೋಗ್ಯ ಮತ್ತು ವಿಮೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಯಾವುದೇ ಸಮಸ್ಯೆಗಳಿದ್ದರೂ ನೇರವಾಗಿ ನನ್ನ ಗಮನಕ್ಕೆ ತಂದರೆ ಅವುಗಳನ್ನು ಪರಿಹರಿಸಲು ಪ್ರಯತ್ನಿಸುತ್ತೇನೆ. ನನ್ನ ಸಹಕಾರ ಸದಾ ಇರುತ್ತದೆ ಎಂದರು.



ಸಮಾಜದಲ್ಲಿ ಇನ್ನೂ ಕಂಡುಬರುತ್ತಿರುವ ಬಾಲ್ಯವಿವಾಹದಂತಹ ಅನಿಷ್ಟ ಪದ್ಧತಿಯನ್ನು ತಡೆಗಟ್ಟುವಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಬಾಲ್ಯವಿವಾಹದ ದುಷ್ಪರಿಣಾಮಗಳ ಕುರಿತು ಪೋಷಕರಲ್ಲಿ ಅರಿವು ಮೂಡಿಸಬೇಕು. ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳಿಗೆ ಸರ್ಕಾರದಿಂದ ದೊರೆಯುವ ಆರೋಗ್ಯ, ಪೌಷ್ಟಿಕ ಆಹಾರ ಹಾಗೂ ಇತರ ಸೌಲಭ್ಯಗಳು ಸಮರ್ಪಕವಾಗಿ ತಲುಪುವಂತೆ ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿಯರು ಸೇರಿದಂತೆ ಸುಮಾರು 900 ಜನರನ್ನು ಶಾಲು ಹೊದಿಸಿ, ಹೂಹಾರ ಹಾಗೂ ಉಡುಗೊರೆ ನೀಡಿ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಭಾಗ್ಯಲಕ್ಷ್ಮೀ ಯೋಜನೆಯ ಫಲಾನುಭವಿಗಳಿಗೆ ಪಾಸ್‌ಬುಕ್ ವಿತರಿಸಲಾಯಿತು. ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮವೂ ನಡೆಯಿತು.

ಈ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಸುಭಾಷ್ ರತ್ನಾ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಉತ್ತಮ್ ಸಂಗೆವಾ ರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀನಿವಾಸ್ ಬಾಳುವಾಲೆ, ವಿಜಯಲಕ್ಷ್ಮಿ, ಶೋಭಾ, ಭಾಗ್ಯವತಿ, ನಿರ್ಮಲಾ, ಶಾಂತಮ್ಮ, ರವಿಕಾ, ರೇಣುಕಾ, ಮಹಾದೇವಿ, ಸುಧೀಷ್ಣಾ, ಪದ್ಮಾವತಿ, ಶ್ರದ್ಧಾ, ಮಂಗಲಾ, ಇಲಾಖೆಯ ಆಕಾಶ, ಸತೀಷ್ ಹಾಗೂ ಶಿವಪುತ್ರ ಉಪಸ್ಥಿತರಿದ್ದರು. ವಿಜಯಲಕ್ಷ್ಮಿ ನಿರೂಪಿಸಿದರು. ಶೋಭಾವತಿ ವಂದಿಸಿದರು.


ಅಧಿಕಾರಿಗಳ ನಿರ್ಲಕ್ಷ್ಯ ಆರೋಪ : ಮಣ್ಣು, ಕಲ್ಲುಗಳಿಂದ ರಸ್ತೆ ದುರಸ್ತಿ ಮಾಡಿದ ಶಾಲಾ ಮಕ್ಕಳು

ಕಲಬುರಗಿ :

ರಸ್ತೆ ದುರಸ್ತಿಗೆ ಹಲವು ಬಾರಿ ಮನವಿ ಮಾಡಿದರೂ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಬೇಸತ್ತ ಶಾಲಾ ಮಕ್ಕಳು ತಾವೇ ರಸ್ತೆ ಗುಂಡಿಗಳನ್ನು ಮಣ್ಣು ಮತ್ತು ಕಲ್ಲುಗಳಿಂದ ಮುಚ್ಚುವ ಮೂಲಕ ಗಮನ ಸೆಳೆದಿದ್ದಾರೆ.

ಕಮಲಾಪುರ ತಾಲ್ಲೂಕಿನ ಕಾಳಮಂದರಗಿ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಮಕ್ಕಳ ಕಾರ್ಯಕ್ಕೆ ಸ್ಥಳೀಯರಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಮತ್ತೊಂದೆಡೆ, ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಆಕ್ರೋಶವೂ ವ್ಯಕ್ತವಾಗಿದೆ. ಕಾಳಮಂದರಗಿಯಿಂದ ಮುಡಬಿ, ಹಿರನಾಗಂವ, ಬಂಗ್ಲಾ ಹಾಗೂ ಬಸವಕಲ್ಯಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಅಲ್ಲಲ್ಲಿ ದೊಡ್ಡ ದೊಡ್ಡ ಗುಂಡಿಗಳು ಬಿದ್ದಿದ್ದು, ವಾಹನ ಸವಾರರು ಸಂಚರಿಸಲು ತೀವ್ರ ತೊಂದರೆ ಅನುಭವಿಸುವಂತಾಗಿದೆ.

ರಸ್ತೆಯಲ್ಲಿ ಗುಂಡಿಗಳು ಹೆಚ್ಚಾಗಿರುವುದರಿಂದ ಬಸ್ ಸಂಚಾರಕ್ಕೂ ಅಡಚಣೆಯಾಗಿದೆ. ವಾಹನಗಳು ನಿಧಾನವಾಗಿ ಚಲಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಶಾಲೆ ತಲುಪಲು ಪರದಾಡುವಂತಾಗಿದೆ. ಮಳೆ ಬಂದಾಗ ಗುಂಡಿಗಳಲ್ಲಿ ನೀರು ನಿಲ್ಲುವುದರಿಂದ ಅವುಗಳ ಆಳ ತಿಳಿಯದೆ ಅಪಘಾತ ಸಂಭವಿಸುವ ಭೀತಿಯೂ ಹೆಚ್ಚಾಗಿದೆ. ರಸ್ತೆ ದುರಸ್ತಿಗೆ ಅಧಿಕಾರಿಗಳು ಗಮನಹರಿಸಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.



ಈ ಕುರಿತು ವಾರ್ತಾಭಾರತಿಯೊಂದಿಗೆ ಮಾತನಾಡಿದ ಬಸವಕಲ್ಯಾಣದಲ್ಲಿ ಅತಿಥಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಸ್ಥಳೀಯ ನಿವಾಸಿ ಜಗದೇವಿ ಹುಳಕರ್ ''ಗ್ರಾಮಕ್ಕೆ ಬರಬೇಕಾದ ಬಸ್‌ಗಳು ಸರಿಯಾದ ಸಮಯಕ್ಕೆ ಬರುತ್ತಿಲ್ಲ. ರಸ್ತೆ ಸರಿಯಿಲ್ಲ ಎಂಬ ಕಾರಣ ನೀಡಿ ಕೆಲವೊಮ್ಮೆ ಎರಡು ದಿನಗಳವರೆಗೆ ಬಸ್‌ಗಳೇ ಬರುವುದಿಲ್ಲ. ಬಸ್ ಡಿಪೋ ವ್ಯವಸ್ಥಾಪಕರನ್ನು ವಿಚಾರಿಸಿದರೆ ರಸ್ತೆ ದುರಸ್ತಿ ಮಾಡಿಸುವಂತೆ ಹೇಳುತ್ತಾರೆ. ಈ ಬಗ್ಗೆ ಗ್ರಾಮ ಪಂಚಾಯಿತಿ ಪಿಡಿಒ ಹಾಗೂ ಇಒ ಅವರ ಗಮನಕ್ಕೂ ತಂದರೂ ಯಾರೂ ಸ್ಪಂದಿಸಿಲ್ಲ. ಇದರಿಂದ ಶಾಲಾ-ಕಾಲೇಜುಗಳಿಗೆ ತೆರಳಲು ತೊಂದರೆಯಾಗುತ್ತಿದೆ. ಹೀಗಾಗಿ ಗ್ರಾಮದ ಎಲ್ಲ ವಿದ್ಯಾರ್ಥಿಗಳು ಒಟ್ಟಾಗಿ ರಸ್ತೆ ದುರಸ್ತಿ ಕಾರ್ಯಕ್ಕೆ ಮುಂದಾಗಿದ್ದೇವೆ. ಸುಮಾರು 9 ಕಿ.ಮೀ. ಉದ್ದದ ರಸ್ತೆ ಹದಗೆಟ್ಟಿದ್ದು, ಭಾನುವಾರ ಹಾಗೂ ಇತರ ರಜಾ ದಿನಗಳಲ್ಲಿ ನಾವೆಲ್ಲರೂ ಸೇರಿ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡುತ್ತಿದ್ದೇವೆ'' ಎಂದು ತಿಳಿಸಿದರು.

ಸಾಮಾನ್ಯವಾಗಿ ರಸ್ತೆ ದುರಸ್ತಿ ಮಾಡುವುದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಆದರೆ, ಅಧಿಕಾರಿಗಳ ನಿರ್ಲಕ್ಷ್ಯದಿಂದ ಶಾಲಾ ಮಕ್ಕಳು ರಸ್ತೆ ಗುಂಡಿಗಳನ್ನು ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಮಕ್ಕಳು ಮಣ್ಣು ಮತ್ತು ಕಲ್ಲುಗಳಿಂದ ಗುಂಡಿಗಳನ್ನು ಮುಚ್ಚಿರುವುದು ತಾತ್ಕಾಲಿಕ ಪರಿಹಾರ ಮಾತ್ರ. ವಾಹನಗಳ ನಿರಂತರ ಸಂಚಾರದಿಂದ ಮತ್ತೆ ಗುಂಡಿಗಳು ಬೀಳುವ ಸಾಧ್ಯತೆಯಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ ರಸ್ತೆಯನ್ನು ಶಾಶ್ವತವಾಗಿ ದುರಸ್ತಿ ಮಾಡಬೇಕು. ಶಾಲಾ ಮಕ್ಕಳ ಸುರಕ್ಷಿತ ಸಂಚಾರಕ್ಕೆ ಆದ್ಯತೆ ನೀಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಒಂದನೇಯ ಪುಟದಿಂದ

ಉದ್ಯೋಗ ಹಾಗೂ ದೇಶದ ಜನರ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರಕ್ಕೆ ಕಾಳಜಿ ಇಲ್ಲ

ಕಾಂಗ್ರೆಸ್ ಮುಖಂಡರು ಆರೋಪಿ ಸಿದರು.

ಇದರಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಹಾಗೂ ಬಡ ಜನರು ಮತದಾನದ ಹಕ್ಕಿನಿಂದ ವಂಚಿತರಾ ಗುವ ಆತಂಕ ಎದುರಾಗಿದೆ. ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಮೂಲಕ ಪ್ರಜಾಪ್ರಭು ತ್ವದ ಆಶಯಗಳಿಗೆ ಧಕ್ಕೆ ಉಂಟು ಮಾಡಲಾಗುತ್ತಿದೆ ಎಂದು ದೂರಿದರು.

ಮತದಾರರ ಪಟ್ಟಿಯಿಂದ ಕೈಬಿಟ್ಟಿ ರುವ ಅರ್ಹ ಮತದಾರರ ಹೆಸರುಗಳನ್ನು ಮರು ಸೇರ್ಪಡೆಗೊಳಿಸಬೇಕು. ಮತ ದಾರರ ಪಟ್ಟಿಯಲ್ಲಿರುವ ಲೋಪದೋ ಷಗಳನ್ನು ಸರಿಪಡಿಸಲು ಸಮರ್ಪಕ ಅವಕಾಶ ನೀಡಬೇಕು. ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾ ಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಮಾಜಿ ಸಚಿವ ಎನ್.ಎಸ್. ಬೋಸ ರಾಜು ಮಾತನಾಡಿ, ಅಧಿಕಾರ ಪಡೆ ಯುವುದನ್ನೇ ಗುರಿಯಾಗಿಸಿಕೊಂಡಿರುವ ಕೇಂದ್ರ ಸರ್ಕಾರಕ್ಕೆ ರೈತರ ಅಭಿವೃದ್ಧಿ, ಯುವಕರ ಉದ್ಯೋಗ ಹಾಗೂ ದೇಶದ ಜನರ ಸಮಸ್ಯೆಗಳ ಬಗ್ಗೆ ಕಾಳಜಿ ಇಲ್ಲ ಎಂದು ಟೀಕಿಸಿದರು.

ಯುವಕರಿಗೆ ಎರಡು ಕೋಟಿ ಉದ್ಯೋಗ ನೀಡುವುದು ಸೇರಿದಂತೆ ಹಲವು ಭರವಸೆಗಳನ್ನು ನೀಡಿದ್ದರೂ ಅವುಗಳನ್ನು ಈಡೇರಿಸಿಲ್ಲ ಎಂದು ಆರೋಪಿಸಿದರು.

ಎಸ್‌ಐಆರ್ ಕೇವಲ ಒಂದು ರಾಜಕೀಯ ಪಕ್ಷಕ್ಕೆ ಸಂಬಂಧಿಸಿದ ವಿಚಾರವಲ್ಲ. ಇದು ದೇಶದ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕು ಮತ್ತು ಸಂವಿಧಾನದ ರಕ್ಷಣೆಗೆ ಸಂಬಂಧಿಸಿದ ವಿಷಯವಾಗಿದೆ. ಆದ್ದರಿಂದ ಎಲ್ಲ ರಾಜಕೀಯ ಪಕ್ಷಗಳು, ವಿವಿಧ ಸಂಘಟ ನೆಗಳು ಹಾಗೂ ಪ್ರಜಾಪ್ರಭುತ್ವಪರ ಹೋರಾಟಗಾರರು ಒಗ್ಗೂಡಿ ಹೋರಾಟ ನಡೆಸಬೇಕು ಎಂದರು.

ಪ್ರತಿಯೊಬ್ಬರೂ ತಮ್ಮ ಮತದಾರರ ಪಟ್ಟಿಯನ್ನು ಪರಿಶೀಲಿಸಬೇಕು. ಹೆಸರು, ವಿಳಾಸ ಸೇರಿದಂತೆ ಯಾವುದೇ ವಿವರ ಗಳಲ್ಲಿ ತಪ್ಪುಗಳಿದ್ದರೆ ಸರಿಪಡಿಸಿಕೊಳ್ಳ ಬೇಕು. ಅರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ಕೈಬಿಟ್ಟಿದ್ದರೆ ಅವುಗಳನ್ನು ಮರು ಸೇರ್ಪಡೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಗ್ರಾಮಮಟ್ಟದಲ್ಲಿ ವಿವಿಧ ಪಕ್ಷಗಳ ಮುಖಂಡರು ಹಾಗೂ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಒಟ್ಟಾಗಿ ಮತದಾ ರರ ಪಟ್ಟಿಯನ್ನು ಪರಿಶೀಲಿಸಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.

ಎಸ್‌ಐಆರ್ ವಿರುದ್ಧದ ಹೋರಾಟದ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ನೋಟಿಸ್ ನೀಡಿರುವುದನ್ನು ಪ್ರಸ್ತಾಪಿಸಿದ ಅವರು, ಮತದಾರರ ಹಕ್ಕುಗಳ ರಕ್ಷಣೆಗಾಗಿ ನ್ಯಾಯಾಲಯದ ಮಧ್ಯಪ್ರವೇಶ ಮಹತ್ವ ದ್ದಾಗಿದೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ನಡೆಯುತ್ತಿರುವ ಹೋರಾಟವನ್ನು ಮುಂದಿನ ದಿನಗಳಲ್ಲಿ ತಾಲ್ಲೂಕು ಹಾಗೂ ಗ್ರಾಮಮಟ್ಟಕ್ಕೆ ವಿಸ್ತರಿಸಲಾಗು ವುದು. ಕೇವಲ ಪ್ರತಿಭಟನೆ ನಡೆಸಿ ಹಿಂದಿರುಗುವುದರಿಂದ ಬದಲಾವಣೆ ಸಾಧ್ಯವಿಲ್ಲ. ನಿರಂತರ ಸಂಘಟನಾ ಚಟುವಟಿಕೆ ಮತ್ತು ಜನಜಾಗೃತಿಯಿಂದ ಮಾತ್ರ ಹೋರಾಟಕ್ಕೆ ಫಲ ಸಿಗಲಿದೆ. ಬೇಡಿಕೆಗಳು ಈಡೇರುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಮುಖಂಡರು ಎಸ್‌ಐಆರ್ ಪ್ರಕ್ರಿಯೆ ಯಲ್ಲಿನ ಲೋಪದೋಷಗಳನ್ನು ಸರಿಪಡಿಸಿ, ಅರ್ಹ ಮತದಾರರ ಹೆಸರು ಗಳನ್ನು ಮರು ಸೇರ್ಪಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ಮತದಾನದ ಹಕ್ಕು ಮತ್ತು ಸಂವಿಧಾನಿಕ ಮೌಲ್ಯಗಳ ರಕ್ಷಣೆಗಾಗಿ ಪಕ್ಷಾತೀತವಾಗಿ ಜನರು ಹೋರಾಟಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಶಾಸಕ ಹಂಪಯ್ಯ ನಾಯಕ,ಜಿ. ಶಿವಮೂರ್ತಿ, ರಾಜಶೇಖರ್ ನಾಯಕ, ಜಯಣ್ಣ, ಪಮಯ್ಯ್ ಮುರಾರಿ, ರುದ್ರಪ್ಪ ಅಂಗಡಿ ಅಮರೇಗೌಡ ಹಂಚಿನಾಳ, ಶ್ರೀನಿವಾಸ, ಚನ್ನಬಸವ ನಾಯಕ್, ರಾಮ್ಮಣ್ಣ ಇರಬೇಗೇರ, ಪವನ್ ಪಾಟೀಲ್, ಬಸವಂತಪ್ಪ, ವಿಶ್ವನಾಥ ಪಟ್ಟಿ, ರಝಾಕ್ ಉಸ್ತಾದ್, ಗಿರಿಯಪ್ಪ ನೆಲಹಾಳ, ಕೆ.ಇ. ಕುಮಾರ್, ಜಯಂತ ರಾವ್ ಪತಂಗೆ, ಜಂಬಣ್ಣ, ಮರೀಗೌಡ, ಅರುಣ್ ದೋತ್ರ ಬಂಡಿ ಜಾವೀದ್, ರಘು,ಸೇರಿದಂತೆ ಕಾಂಗ್ರೆಸ್ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ ರೂ.100 ಕೋಟಿಗೂ ಅಧಿಕ ಹಣ ಖರ್ಚು; ಕೆರೆ ಮಾತ್ರ ಕೊಳಚೆಗುಂಡಿ: ರಾಮನಗೌಡ ಏಗನೂರು ಆಕ್ರೋಶ

ಇಲ್ಲಿ ಅಭಿವೃದ್ಧಿಯ ಹೆಸರಿನಲ್ಲಿ ಕೆರೆಯ ಜಾಗವನ್ನೇ ಒತ್ತುವರಿ ಮಾಡಲಾಗುತ್ತಿದೆ. ಸುಮಾರು 10ರಿಂದ 11 ಎಕರೆ ಕೆರೆ ಜಮೀನು ಒತ್ತುವರಿಯಾಗಿದೆ ಎಂಬ ಆರೋಪಗಳಿದ್ದರೂ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ. ಒತ್ತುವರಿಯಾಗಿರುವ ಜಮೀನುಗಳಿಗೆ ಅಭಿವೃದ್ಧಿ ಹೆಸರಿನಲ್ಲಿ ಅನುದಾನ ನೀಡುತ್ತಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಕೆರೆಯ ನೀರು ವಿಷಪೂರಿತ; ಜನರ ಆರೋಗ್ಯದೊಂದಿಗೆ ಚೆಲ್ಲಾಟ

ಮಾವಿನಕೆರೆಯಲ್ಲಿ ನಗರದ ವಿವಿಧ ಭಾಗಗಳ ಚರಂಡಿ ನೀರು, ಕೊಳಚೆ ನೀರು, ಬಾತ್‌ರೂಮ್‌ಗಳ ತ್ಯಾಜ್ಯ ನೀರು ನಿರಂತರ ವಾಗಿ ಸೇರುತ್ತಿದೆ. ಇದರಿಂದ ಕೆರೆಯ ನೀರು ಹಸಿರು ಬಣ್ಣಕ್ಕೆ ತಿರುಗಿದ್ದು, ತೀವ್ರವಾಗಿ ಕಲುಷಿತಗೊಂಡಿದೆ. ಈ ನೀರನ್ನು ಜಾನುವಾರುಗಳು ಕುಡಿದರೂ ಜೀವಕ್ಕೆ ಅಪಾಯ ಎದುರಾಗುವ ಪರಿಸ್ಥಿತಿ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

"ಇದು ಯಾವುದಾದರೂ ಪ್ರಾಣಿ ಕುಡಿಯುವ ನೀರೇ ಕೆರೆಯ ನೀರು ಸಂಪೂರ್ಣ ಕಲುಷಿತವಾಗಿದೆ. ಮೊದಲು ಕೆರೆಗೆ ಸೇರುತ್ತಿರುವ ಕೊಳಚೆ ನೀರನ್ನು ಹೊರಹಾಕಿ. ಒಳಚರಂಡಿ ನೀರು ಕೆರೆಗೆ ಸೇರುವುದನ್ನು ತಡೆಯಿರಿ. ಇದನ್ನೇ ಮಾವಿ ನಕೆರೆ ಅಭಿವೃದ್ಧಿ ಎಂದು ಹೇಳುತ್ತಿದ್ದೀರಾ" ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಕೆರೆಯ ನೀರು ಸಮೀಪದ ಬೋರ್ ವೆಲ್‌ಗಳಿಗೆ ಸೇರುವ ಸಾಧ್ಯತೆಯಿದ್ದು, ಇದರಿಂದ ಸುತ್ತಮುತ್ತಲಿನ ನಿವಾಸಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಆತಂಕವಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ನೀರಿನ ಗುಣಮಟ್ಟ ಪರೀಕ್ಷಿಸಿ, ಸಾರ್ವ ಜನಿಕರ ಆರೋಗ್ಯ ರಕ್ಷಣೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕೆರೆ ಮಧ್ಯದ ರಸ್ತೆ ಕಾಮಗಾರಿ ಅರ್ಧಕ್ಕೆ ನಿಲ್ಲಿಸಿರುವುದೇಕೆ ಕೆರೆಯ ಮಧ್ಯದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಆರಂಭಿಸಿ ಅರ್ಧಕ್ಕೆ ನಿಲ್ಲಿಸಲಾಗಿದೆ. ಈ ಕಾಮಗಾರಿ ಯನ್ನು ಪೂರ್ಣಗೊಳಿಸಿದರೆ ಒತ್ತುವರಿ ಯಾಗಿರುವ ಜಮೀನುಗಳಿಗೆ ದಾರಿ ಕಲ್ಪಿಸಿದಂತಾಗುತ್ತದೆ. ಕೆರೆಯ ಸಂರಕ್ಷಣೆಗೆ ಆದ್ಯತೆ ನೀಡಬೇಕಾದ ಅಧಿಕಾರಿಗಳು ಒತ್ತುವರಿಗೆ ಅನುಕೂಲವಾಗುವ ರೀತಿಯಲ್ಲಿ ಕಾಮಗಾರಿ ನಡೆಸುತ್ತಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ 15 ವರ್ಷಗಳಿಂದ ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ ಅನುದಾನ ಖರ್ಚು ಮಾಡಲಾಗುತ್ತಿದೆ. ಆದರೆ, ಇಂದಿಗೂ ಸಾರ್ವಜನಿಕರು ಕೆರೆಯ ಸುತ್ತಮುತ್ತ ಕುಳಿತುಕೊಳ್ಳಲು ಒಂದು ಕುರ್ಚಿ ಹಾಕು ವಂತಹ ವ್ಯವಸ್ಥೆಯೂ ನಿರ್ಮಾಣವಾಗಿಲ್ಲ. ಅಭಿವೃದ್ಧಿ ಹೆಸರಿನಲ್ಲಿ ಹಣ ಖರ್ಚು ಮಾಡಿರುವುದಕ್ಕೆ ಅಧಿಕಾರಿಗಳು ಉತ್ತರ ನೀಡಬೇಕು ಎಂದು ಆಗ್ರಹಿಸಿದರು.

ಅನುದಾನದ ವಿವರ ನೀಡದ ಅಧಿಕಾರಿಗಳು

ರಾಯಚೂರು ನಗರಕ್ಕೆ ಸಾವಿರಾರು ಕೋಟಿ ರೂಪಾಯಿ ಅನುದಾನ ಬರುತ್ತಿದ್ದು, ಅದರಲ್ಲಿ ಮಾವಿನಕೆರೆ ಅಭಿವೃದ್ಧಿಗೆ ಕೋಟ್ಯಂತರ ರೂಪಾಯಿ ಖರ್ಚು ಮಾಡಲಾಗಿದೆ ಎಂದು ಹೇಳಲಾಗುತ್ತಿದೆ. ಅಮೃತ್ ಯೋಜನೆ, ಕೆರೆ ಅಭಿವೃದ್ಧಿ ಯೋಜನೆ, ನಗರಸಭೆ ಹಾಗೂ ಮಹಾ ನಗರ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಮೂಲಕ ಅನುದಾನ ಬಳಕೆಯಾಗಿದೆ.

ಆದರೆ, ಯಾವ ಇಲಾಖೆಯಿಂದ ಎಷ್ಟು ಅನುದಾನ ಬಂದಿದೆ? ಯಾವ ಯೋಜನೆಯಡಿ ಕಾಮಗಾರಿ ಕೈಗೊಳ್ಳಲಾಗಿದೆ? ಎಷ್ಟು ಹಣ ಖರ್ಚು ಮಾಡಲಾಗಿದೆ? ಎಂಬ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡುತ್ತಿಲ್ಲ. ಮಾಹಿತಿ ಹಕ್ಕು ಕಾಯ್ದೆಯಡಿ ಹಲವು ಬಾರಿ ಮಾಹಿತಿ ಕೇಳಿದರೂ ವರದಿ ನೀಡಿಲ್ಲ ಎಂದು ರಾಮನಗೌಡ ಏಗನೂರು ಆರೋ ಪಿಸಿದರು.

ಸರ್ಕಾರದ ಅನುದಾನದಲ್ಲಿ ಯಾವುದೇ ಕಾಮಗಾರಿ ಕೈಗೊಂಡರೂ ಕಾಮಗಾರಿಯ ಹೆಸರು, ಯೋಜನೆ, ಅನುದಾನದ ಮೂಲ, ವೆಚ್ಚದ ವಿವರ, ಸಂಬಂಧಪಟ್ಟ ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನೊಳಗೊಂಡ ಮಾಹಿತಿ ಫಲಕ ಅಳವಡಿಸಬೇಕು. ಆದರೆ, ಮಾವಿನ ಕೆರೆಯಲ್ಲಿ ಕೋಟ್ಯಂತರ ರೂಪಾಯಿ ವೆಚ್ಚದ ಕಾಮಗಾರಿಗಳು ನಡೆಯುತ್ತಿದ್ದರೂ ಮಾಹಿತಿ ಫಲಕಗಳೇ ಕಾಣಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜನಸೇವೆ ಮಾಡುವುದು ಅಧಿಕಾರಿಗಳ ಕರ್ತವ್ಯ

ಅಧಿಕಾರಿಗಳು ಪಕ್ಷದ ಅಥವಾ ವ್ಯಕ್ತಿಗಳ ಸೇವೆ ಮಾಡುವುದಕ್ಕಿಂತ ಸಾರ್ವಜನಿಕರ ಸೇವೆಗೆ ಆದ್ಯತೆ ನೀಡಬೇಕು. ಜನಸೇವೆ ಮಾಡಲು ಬಂದಿರುವ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಅರಿತು ಕೆಲಸ ಮಾಡ ಬೇಕು. ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವುದು ಅಧಿಕಾರಿಗಳ ಹಾಗೂ ಜನಪ್ರತಿನಿಧಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು.

"ರಾಜಕಾರಣಿಗಳ ಮೂಲಕ ಹೇಳಿ ಹೇಳಿ ಸಾಕಾಗಿದೆ. ಇನ್ನು ಅಧಿಕಾರಿಗಳು ಕ್ರಮ ಕೈಗೊಳ್ಳದಿದ್ದರೆ ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ಗಳಲ್ಲಿ ಪ್ರಕರಣ ದಾಖಲಿಸಲು ನಾವು ಸಿದ್ಧರಿದ್ದೇವೆ. ಶಾಸ ಕಾಂಗದಿಂದ ನೀಡುವ ಅನುದಾನವನ್ನು ಕಾರ್ಯಾಂಗ ಸಮರ್ಪಕವಾಗಿ ಬಳಸಿ ಕೊಳ್ಳಬೇಕು. ಆದರೆ, ಸಾರ್ವಜನಿಕರ ಸಮಸ್ಯೆಗಳು ಬಗೆಹರಿಯದಿದ್ದರೆ ನ್ಯಾಯಾಂಗದ ಮೊರೆ ಹೋಗುವುದು ಅನಿವಾರ್ಯವಾಗುತ್ತದೆ" ಎಂದು ಎಚ್ಚರಿಕೆ ನೀಡಿದರು.

ಮಾವಿನಕೆರೆ ಅಭಿವೃದ್ಧಿ ಹೆಸರಿನಲ್ಲಿ ಅನುದಾನ ಖರ್ಚು ಮಾಡುವುದಷ್ಟೇ ಅಭಿವೃದ್ಧಿಯಲ್ಲ. ಕೆರೆಯ ಒತ್ತುವರಿ ತೆರವು, ಕೊಳಚೆ ನೀರಿನ ಸೇರ್ಪಡೆ ತಡೆ, ನೀರಿನ ಶುದ್ಧೀಕರಣ ಹಾಗೂ ಸಾರ್ವ ಜನಿಕರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ಕೆಲಸಗಳಿಗೆ ಆದ್ಯತೆ ನೀಡಬೇಕು. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಸಾರ್ವಜನಿಕರ ಹಿತಾಸಕ್ತಿಗಾಗಿ ಹೋರಾಟ ತೀವ್ರಗೊಳಿ ಸಲಾಗುವುದು ಎಂದು ರಾಮನಗೌಡ ಏಗನೂರು ಎಚ್ಚರಿಕೆ ನೀಡಿದರು.

ವಕೀಲರ ರಕ್ಷಣಾ ಕಾಯ್ದೆ ಕಟ್ಟುನಿಟ್ಟಾಗಿ ಜಾರಿಗೊಳಿಸಲು ಸೋಮಶೇಖರ ಕರದಾಳ ಒತ್ತಾಯ



ಚಿತ್ತಾಪುರ:

ವಕೀಲರ ವೃತ್ತಿಪರ ಭದ್ರತೆಗಾಗಿ ನ್ಯಾಯವಾದಿಗಳ ರಕ್ಷಣಾ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ತಾಲೂಕು ವಕೀಲರ ಸಂಘದ ಅಧ್ಯಕ್ಷ ಸೋಮಶೇಖರ ಕರದಾಳ ಒತ್ತಾಯಿಸಿದರು.

ಪಟ್ಟಣದ ತಾಲೂಕು ವಕೀಲರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದ ಅವರು, ಕಾಯ್ದೆಯಲ್ಲಿನ ಲೋಪದೋಷಗಳನ್ನು ತಿದ್ದುಪಡಿ ಮಾಡಬೇಕು. ವಕೀಲರಿಗೆ ಸೂಕ್ತ ರಕ್ಷಣೆ ಒದಗಿಸುವುದರ ಜೊತೆಗೆ ಅವರ ಮೇಲಿನ ದೌರ್ಜನ್ಯ ಮತ್ತು ಹಲ್ಲೆಗಳನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ವಕೀಲರು ನ್ಯಾಯಾಂಗ ವ್ಯವಸ್ಥೆಯ ಅವಿಭಾಜ್ಯ ಅಂಗವಾಗಿದ್ದಾರೆ. ಸಂವಿಧಾನ ಮತ್ತು ಕಾನೂನಿನ ಚೌಕಟ್ಟಿನಲ್ಲಿ ಸಾರ್ವಜನಿಕರಿಗೆ ನ್ಯಾಯ ದೊರಕಿಸಿಕೊಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಕಕ್ಷಿದಾರರ ಪರವಾಗಿ ನ್ಯಾಯಾಲಯದಲ್ಲಿ ವಾದ ಮಂಡಿಸುವುದು, ಅನ್ಯಾಯದ ವಿರುದ್ಧ ಕಾನೂನು ಹೋರಾಟ ನಡೆಸುವುದು ಹಾಗೂ ಸಾರ್ವಜನಿಕರ ಹಕ್ಕುಗಳನ್ನು ರಕ್ಷಿಸುವುದು ವಕೀಲರ ಪ್ರಮುಖ ಕರ್ತವ್ಯವಾಗಿದೆ ಎಂದು ಹೇಳಿದರು.

ವೃತ್ತಿಪರ ಕರ್ತವ್ಯಗಳನ್ನು ನಿರ್ವಹಿಸುವ ಸಂದರ್ಭದಲ್ಲಿ ಕೆಲವು ವ್ಯಕ್ತಿಗಳಿಂದ ವಕೀಲರ ಮೇಲೆ ಹಲ್ಲೆ, ದೌರ್ಜನ್ಯ, ಜೀವ ಬೆದರಿಕೆ ಹಾಗೂ ವೃತ್ತಿಗೆ ಅಡ್ಡಿಪಡಿಸುವ ಘಟನೆಗಳು ನಡೆಯುತ್ತಿವೆ. ಇದರಿಂದ ವಕೀಲ ಸಮುದಾಯದಲ್ಲಿ ಅಭದ್ರತೆಯ ವಾತಾವರಣ ನಿರ್ಮಾಣವಾಗಿದೆ. ಕಾಯ್ದೆಯು ಕೇವಲ ಕಾನೂನು ಪುಸ್ತಕಗಳಿಗೆ ಸೀಮಿತವಾಗದೆ, ರಾಜ್ಯದ ಪ್ರತಿಯೊಬ್ಬ ವಕೀಲರಿಗೂ ನೈಜ ಭದ್ರತೆ ಒದಗಿಸುವಂತಾಗ ಬೇಕು. ಈ ನಿಟ್ಟಿನಲ್ಲಿ ಸರ್ಕಾರ ಕಾಯ್ದೆಯ ಅನುಷ್ಠಾನವನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ತರಬೇಕು ಎಂದು ಒತ್ತಾಯಿಸಿದರು.

ಜಾರಿಯಲ್ಲಿರುವ ಕರ್ನಾಟಕ ನಿಷೇಧಿತ ವಕೀಲರ ಮೇಲಿನ ಹಿಂಸಾಚಾರ ಅಧಿನಿಯಮ, 2023 ಅನ್ನು ರಾಜ್ಯಾದ್ಯಂತ ಕಟ್ಟುನಿಟ್ಟಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ವಕೀಲರಿಗೆ ಹೆಚ್ಚಿನ ಕಾನೂನು ರಕ್ಷಣೆ ದೊರೆಯುವಂತೆ ಅಗತ್ಯ ತಿದ್ದುಪಡಿಗಳನ್ನು ತರಬೇಕು. ವಕೀಲರ ಮೇಲೆ ಹಲ್ಲೆ, ದೌರ್ಜನ್ಯ, ಜೀವ ಬೆದರಿಕೆ ಹಾಗೂ ವೃತ್ತಿಪರ ಕರ್ತವ್ಯಕ್ಕೆ ಅಡ್ಡಿಪಡಿಸುವವರ ವಿರುದ್ಧ ಕಾಯ್ದೆಯಡಿ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು. ಪೊಲೀಸ್ ಅಧಿಕಾರಿಗಳು ವಿಳಂಬ ಮಾಡದೆ ಪ್ರಕರಣ ದಾಖಲಿಸಿ, ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಸೂಕ್ತ ನಿರ್ದೇಶನ ನೀಡಬೇಕು. ವಕೀಲರಿಗೆ ಅಗತ್ಯ ಪೊಲೀಸ್ ರಕ್ಷಣೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ವಕೀಲರ ಮೇಲೆ ಹಲ್ಲೆ ನಡೆಸುವವರ ವಿರುದ್ಧ ಕಾನೂನಿನ ಪ್ರಕಾರ ಕಠಿಣ ಕ್ರಮ ಕೈಗೊಂಡು, ಪ್ರಕರಣಗಳ ತನಿಖೆ ಮತ್ತು ವಿಚಾರಣೆ ತ್ವರಿತವಾಗಿ ನಡೆಯುವಂತೆ ಕ್ರಮ ವಹಿಸಬೇಕು. ವಕೀಲರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸುವುದನ್ನು ತಡೆಗಟ್ಟಲು ಸೂಕ್ತ ಕಾನೂನು ರಕ್ಷಣೆ ಒದಗಿಸಬೇಕು. ರಾಜ್ಯದ ಎಲ್ಲ ವಕೀಲರ ಸಂಘಗಳು ಹಾಗೂ ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿ ರಚಿಸಿ, ವಕೀಲರ ಸುರಕ್ಷತೆ ಮತ್ತು ಕಾಯ್ದೆಯ ಅನುಷ್ಠಾನದ ಕುರಿತು ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸ ಲಾಯಿತು.

ವಕೀಲರ ರಕ್ಷಣೆಗಾಗಿ ಪ್ರತಿ ಜಿಲ್ಲೆಯಲ್ಲಿ ವಿಶೇಷ ನೋಡಲ್ ಅಧಿಕಾರಿಯನ್ನು ನೇಮಿಸಬೇಕು. ವಕೀಲರ ಕುಟುಂಬದ ಸದಸ್ಯರಿಗೆ ಬೆದರಿಕೆ ಅಥವಾ ಕಿರುಕುಳ ನೀಡುವ ಘಟನೆಗಳನ್ನೂ ಗಂಭೀರವಾಗಿ ಪರಿಗಣಿಸಿ, ಕಾನೂನಿನ ಪ್ರಕಾರ ಅಗತ್ಯ ರಕ್ಷಣೆ ಒದಗಿಸಬೇಕು. ವಕೀಲರ ವೃತ್ತಿಯ ಗೌರವ, ಸ್ವಾತಂತ್ರ್ಯ ಮತ್ತು ಭದ್ರತೆಯನ್ನು ಕಾಪಾಡಲು ರಾಜ್ಯ ಸರ್ಕಾರ ಅಗತ್ಯ ಬಜೆಟ್ ಹಾಗೂ ಆಡಳಿತಾತ್ಮಕ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು. ನಂತರ ರಾಜ್ಯಪಾಲರಿಗೆ ಬರೆದ ಮನವಿ ಪತ್ರವನ್ನು ಗ್ರೇಡ್-2 ತಹಶೀಲ್ದಾರ್ ರಾಜಕುಮಾರ ಮರತೂರಕರ ಅವರಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಭೀಮಶಪ್ಪ ಎಲ್. ವಾಡಿ, ಚಂದ್ರಶೇಖರ ಅವಂಟಿ, ಎಸ್.ಎನ್. ಜೋಶಿ, ಗಂಗಾಧರ ಸಾಲಿಮಠ, ಎಸ್.ಪಿ. ಸಾತನೂರ, ಬಿ.ಬಿ. ದೊಡ್ಡಮನಿ, ನಾಗರಾಜ ಕಡಬೂರ, ಪ್ರಸಾದ ಅವಂಟಿ, ಸಂಗಮೇಶ ನಂದೂರಕರ್ ಮಂಜೂಳಾ ಸರಡಗಿ, ಶರಣಮ್ಮ ಗಂಗಾಣಿ, ಗೀತಾ ಕಟ್ಟಿಮನಿ, ಜಯಾಸುಧಾ, ಸವಿತಾ ಪಾಟೀಲ್, ಶೇಖ್ ಹುಸೇನ್ ಪಾಶಾ, ಸೈಯದ್ ಮಸ್ತಾನ್, ಈಶ್ವರ ಅಳ್ಳೊಳ್ಳಿ, ಶರಣಗೌಡ ಪಾಟೀಲ ಆಲೂರ್ ಜಿ.ಎಸ್. ಹಿರೇಮಠ, ಅಶ್ವತ್ಥರಾಮ ರಾಠೋಡ, ಬಸವರಾಜ ಸಿಂಪಿ, ಖಾಜಾಖಾನ್ ರಾವೂರ, ಅಯ್ಯಣ್ಣ ಅವಂಟಿ, ಧೂಳಪ್ಪ ಮಾಲಗತ್ತಿ ಹಾಗೂ ಚಂದ್ರಶೇಖರ ಅಂಗಡಿ ಉಪಸ್ಥಿತರಿದ್ದರು.



ವಕೀಲರ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ

ಕಾಳಗಿ:

ಕರ್ತವ್ಯನಿರತ ವಕೀಲರ ಮೇಲೆ ಹೆಚ್ಚುತ್ತಿರುವ ಹಲ್ಲೆ, ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳನ್ನು ಖಂಡಿಸಿ, ಕರ್ನಾಟಕ ವಕೀಲರ ಮೇಲಿನ ಹಿಂಸಾಚಾರ ನಿಷೇಧ ಕಾಯ್ದೆ-2023 ಅನ್ನು ತಕ್ಷಣ ಜಾರಿಗೊಳಿಸುವಂತೆ ಆಗ್ರಹಿಸಿ ಕಾಳಗಿ ವಕೀಲರ ಸಂಘದ ವತಿಯಿಂದ ಮಂಗಳವಾರ ತಾಲೂಕು ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಲಾಯಿತು. ಬಳಿಕ ತಹಸೀಲ್ದಾರ್ ಪೃಥ್ವಿರಾಜ್ ಪಾಟೀಲ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ವಕೀಲರು, ಕರ್ತವ್ಯನಿರತ ವಕೀಲರ ಮೇಲೆ ಹಲ್ಲೆ ಹಾಗೂ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ಕಾಯ್ದೆಯನ್ನು ಜಾರಿಗೊಳಿಸಿ ವಕೀಲರಿಗೆ ಸೂಕ್ತ ರಕ್ಷಣೆ ಒದಗಿಸಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಇತ್ತೀಚೆಗೆ ಬೆಂಗಳೂರಿನ ವೈಟ್‌ಫೀಲ್ಡ್‌ನ ವಕೀಲ ಮಂಜುನಾಥ್ ಹಾಗೂ ಅನ್ನಪೂರ್ಣೇಶ್ವರಿ ನಗರದ ವಕೀಲ ಶ್ರೀರಾಮ್ ಅವರ ಹತ್ಯೆ ಮತ್ತು ಗೌರಿಬಿದನೂರಿನ ವಕೀಲ ವೆಂಕಟರಮಣ ಸನ್ನಕಿ ಅವರ ಮೇಲಿನ ಕೊಲೆ ಯತ್ನ ಪ್ರಕರಣಗಳನ್ನು ಪ್ರತಿಭಟನೆಯಲ್ಲಿ ತೀವ್ರವಾಗಿ ಖಂಡಿಸಲಾಯಿತು.

ಇಂತಹ ಪ್ರಕರಣಗಳ ತ್ವರಿತ ವಿಚಾರಣೆಗಾಗಿ ವಿಶೇಷ ಶೀಘ್ರಗತಿ ನ್ಯಾಯಾಲಯ ಸ್ಥಾಪಿಸಬೇಕು. ಅಪರಾಧಿಗಳಿಗೆ ಶೀಘ್ರ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳುವುದರ ಜತೆಗೆ ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಪ್ರತಿಭಟನೆಯಲ್ಲಿ ವಕೀಲರ ಸಂಘದ ಕಾರ್ಯದರ್ಶಿ ಮೊಹಮ್ಮದ್ ಅಲಿ, ಸಿ.ಎಸ್. ಪೂಜಾರಿ, ಜಗದೀಶ್ ಸಂಗನ್, ಮಹಮ್ಮದ್ ಸಮೀರ, ಅರ್ಜುನ ಚವ್ಹಾಣ, ಜೈಭೀಮ ಸಾಗರ, ಎಸ್.ಕೆ. ಕುಂಸಿ, ಸಂಪತ್ತಕುಮಾರ ಎಂ.ಟಿ., ಇರಾರೆಡ್ಡಿ ರುಮ್ಮನಗುಡ, ಮಹಾದೇವಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತರಿಂದ ಪ್ರತಿಭಟನೆ



ಬೀದರ್

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಮಂಗಳವಾರ ನಗರದ ಅಂಬೇಡ್ಕರ್ ವೃತ್ತದ ಬಳಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ಸರ್ಕಾರಿ ಅತಿಥಿಗೃಹದಿಂದ ಆರಂಭವಾದ ಪ್ರತಿಭಟನಾ ರ್‍ಯಾಲಿಯು ಪ್ರಮುಖ ಬೀದಿಗಳಲ್ಲಿ ಸಾಗಿ ಅಂಬೇಡ್ಕರ್ ವೃತ್ತದ ಬಳಿ ಸಮಾವೇಶಗೊಂಡಿತು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ರೈತ ವಿರೋಧಿ ಧೋರಣೆಯ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿಗೆ ಸಲ್ಲಿಸಿದ ಮನವಿಯಲ್ಲಿ, ಕಬ್ಬಿಗೆ ಸೂಕ್ತ ಬೆಲೆ ನಿಗದಿ, ರೈತರ ಸಾಲಮನ್ನಾ, ಬೆಳೆ ವಿಮೆ ಹಣ ಬಿಡುಗಡೆ ಹಾಗೂ ಕಾಡುಪ್ರಾಣಿಗಳಿಂದ ಬೆಳೆಗಳ ರಕ್ಷಣೆಯೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಲಾಗಿದೆ. ಈ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೃಷಿಕರು ನಡೆಸುತ್ತಿರುವ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದೆ. ಕಳೆದ ಎರಡು ತಿಂಗಳಿಂದ ಮಹಾರಾಷ್ಟ್ರ ಮತ್ತು ಕರ್ನಾಟಕದ ರೈತರು ಜಂಟಿಯಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರಗಳು ಕಾಲಹರಣ ಮಾಡುತ್ತಿವೆ ಎಂದು ಆರೋಪಿಸಲಾಗಿದೆ.

ಪ್ರತಿ ಟನ್ ಕಬ್ಬಿಗೆ 5,500 ರೂ. ಬೆಲೆ ನಿಗದಿಪಡಿಸಬೇಕು. ರಾಜ್ಯದಲ್ಲಿ ಬರಗಾಲ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ರೈತರ ಸಂಪೂರ್ಣ ಸಾಲಮನ್ನಾ ಮಾಡಬೇಕು. ಬೆಳೆ ವಿಮೆ ಪಾವತಿಸಿರುವ ರೈತರಿಗೆ ಶೇ.100ರಷ್ಟು ವಿಮೆ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು. ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಅನುದಾನದಡಿ ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಬೇಕು. ಹೊಲಗಳಲ್ಲಿ ಕಬ್ಬು ಬೆಳೆ ಸುಟ್ಟುಹೋಗಿರುವ ರೈತರಿಗೆ ಪರಿಹಾರ ಒದಗಿಸಬೇಕು. ಹಗಲಿನ ವೇಳೆಯಲ್ಲಿ ನಿರಂತರ ಏಳು ಗಂಟೆಗಳ ಕಾಲ ವಿದ್ಯುತ್ ಪೂರೈಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ರೈತರ ಹಿತರಕ್ಷಣೆಗೆ ಸರ್ಕಾರ ತಕ್ಷಣ ಮುಂದಾಗದಿದ್ದರೆ ಮುಂಬರುವ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘಟನೆಯ ಪದಾಧಿಕಾರಿಗಳು ಎಚ್ಚರಿಕೆ ನೀಡಿದರು.

ಜೈಲ್ ಭರೋ ಆಂದೋಲನಕ್ಕೆ ಬೆಂಬಲ :

ಗುಲ್ಬರ್ಗಾದಿಂದ ಹಿಂಡಲಗಾ ಜ ೈ ಲಿ ನ ' ವ ' ರ ೆ ಗ ಿ ಆಯೋಜಿಸಲಾಗಿರುವ ಜೈಲ್ ಭರೋ ಚಳವಳಿಗೆ ಸಂಪೂರ್ಣ ಬೆಂಬಲ ನೀಡಲಾಗುವುದು ಎಂದು ಪ್ರತಿಭಟನಾಕಾರರು ತಿಳಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್ ಸ್ವಾಮಿ, ಹಸಿರು ಸೇನೆಯ ಜಿಲ್ಲಾಧ್ಯಕ್ಷ ಮಲ್ಲಾರೆಡ್ಡಿ ಮುರಾಳ್, ಸೇರಿದಂತೆ ಅನೇಕ ರೈತ ಮುಖಂಡರು ಮತ್ತು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಗ್ರಾಮಗಳಲ್ಲಿ ಶಾಂತಿ, ಸೌಹಾರ್ದ ಕಾಪಾಡಿ; ಶಿಕ್ಷಣ ಮತ್ತು ಸರ್ಕಾರಿ ಸೌಲಭ್ಯಗಳನ್ನು ಪಡೆದು ಅಭಿವೃದ್ಧಿಯತ್ತ ಸಾಗಬೇಕು: ಎಸ್ಪಿ...

ಪಂಚಾಯತ್ ವ್ಯಾಪ್ತಿಯ ಆಯ್ದ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಹಾಗೂ ಕಾನೂನಿನ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದರಂತೆ ನವೆಂಬರ್ 4ರಂದು ಆತಕೂರು ಗ್ರಾಮದಲ್ಲಿ ಸಮನ್ವಯ ಸಭೆ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗ್ರಾಮದಲ್ಲಿ ಯಾವುದೇ ಸಮಸ್ಯೆಗಳಿದ್ದರೂ ಸಭೆಯಲ್ಲಿ ಮುಕ್ತವಾಗಿ ತಿಳಿಸಬಹುದು. ಜಾತಿ, ಮತ, ಪಂಥ ಎಂಬ ಭೇದಭಾವವಿಲ್ಲದೆ ಪ್ರತಿಯೊಬ್ಬರೂ ಸಾಮರಸ್ಯದಿಂದ ಜೀವನ ನಡೆಸಬೇಕು. ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಮಾತುಕತೆಯ ಮೂಲಕ ಬಗೆಹರಿಸಿಕೊಂಡು ಗ್ರಾಮದ ಶಾಂತಿ ಕಾಪಾಡಬೇಕು ಎಂದು ಹೇಳಿದರು.

ಸರಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಿ

ತಾಲೂಕು ಪಂಚಾಯತ್ ರಾಯಚೂರಿನ ಕಾರ್ಯನಿರ್ವಾಹಕ ಅಧಿಕಾರಿ ಮಾತನಾಡಿ, ಆತಕೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಸುಮಾರು ಶೇ.50ರಷ್ಟಿದೆ. ಈ ಸಮುದಾಯದ ಜನರು ಸೇರಿದಂತೆ ಅರ್ಹ ಫಲಾನುಭವಿಗಳು ಕಾನೂನಿನ ಚೌಕಟ್ಟಿನಲ್ಲಿ ಹಾಗೂ ಸಂವಿಧಾನಬದ್ಧವಾಗಿ ದೊರೆಯುವ ಸರಕಾರಿ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಗ್ರಾಮದಲ್ಲಿ ಒಟ್ಟು 901 ಶೌಚಾಲಯಗಳಿದ್ದು, ಅವುಗಳಲ್ಲಿ 601 ಶೌಚಾಲಯಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ಸೇರಿವೆ. ಶೌಚಾಲಯ ನಿರ್ಮಿಸಿಕೊಳ್ಳಲು ಬಯಸುವ ಅರ್ಹ ಕುಟುಂಬಗಳು ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ ಸರಕಾರದ ವತಿಯಿಂದ ಪ್ರತೀ ಶೌಚಾಲಯಕ್ಕೆ 20 ಸಾವಿರ ರೂ. ಪ್ರೋತ್ಸಾ ಹಧನವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಅದೇ ರೀತಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಮನೆ ನಿರ್ಮಾಣಕ್ಕೆ ಪ್ರೋತ್ಸಾ ಹಧನ ನೀಡಲಾಗುತ್ತಿದ್ದು, ಜನರು ಈ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ದೌರ್ಜನ್ಯಕ್ಕೆ ಒಳಗಾದವರು ಕಾನೂನಿನ ನೆರವು ಪಡೆಯಿರಿ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆ ಸಮಿತಿ ಸದಸ್ಯ ಕೆ.ಇ. ಕುಮಾರ್ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಯಾವುದೇ ರೀತಿಯ ದೌರ್ಜನ್ಯಕ್ಕೆ ಒಳಗಾದಲ್ಲಿ ಭಯಪಡದೆ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿ, ಕಾನೂನಿನಡಿ ದೊರೆಯುವ ಸೌಲಭ್ಯ ಹಾಗೂ ನ್ಯಾಯವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಆತಕೂರು ಮಾದರಿ ಗ್ರಾಮವಾಗಲಿ: ತಹಶೀಲ್ದಾರ್

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ಮಾತನಾಡಿ, ಆತಕೂರು ಗ್ರಾಮವು ಮಾದರಿ ಗ್ರಾಮವಾಗಿ ರೂಪುಗೊಳ್ಳಬೇಕಾದರೆ ಪ್ರತಿಯೊಬ್ಬರೂ ಜಾತಿ, ಮತ, ಧರ್ಮದ ಭೇದಭಾವಗಳನ್ನು ಬದಿಗಿಟ್ಟು ಪರಸ್ಪರ ಸಹೋದರರಂತೆ ಬದುಕಬೇಕು. ಮಾನವೀಯತೆಯೇ ಎಲ್ಲಕ್ಕಿಂತ ದೊಡ್ಡ ಧರ್ಮ. ನಾವೆಲ್ಲರೂ ಒಂದೇ ಮಾನವ ಕುಲಕ್ಕೆ ಸೇರಿದವರಾಗಿದ್ದು, ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸಹಕಾರದಿಂದ ಗ್ರಾಮದಲ್ಲಿ ಶಾಂತಿಯ ವಾತಾವರಣ ನಿರ್ಮಿಸಬೇಕು ಎಂದು ಕರೆ ನೀಡಿದರು.

ಗ್ರಾಮದ ಪ್ರತಿಯೊಬ್ಬ ನಾಗರಿಕರೂ ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಸಾಮಾಜಿಕ ಸಾಮರಸ್ಯಕ್ಕೆ ಆದ್ಯತೆ ನೀಡಬೇಕು. ಶಿಕ್ಷಣ, ಕಾನೂನು ಅರಿವು ಹಾಗೂ ಸರಕಾರದ ಸೌಲಭ್ಯಗಳ ಸದುಪಯೋಗದ ಮೂಲಕ ಗ್ರಾಮವನ್ನು ಅಭಿವೃದ್ಧಿಯ ಮಾದರಿಯನ್ನಾಗಿ ರೂಪಿಸಬೇಕು ಎಂದು ಹೇಳಿದರು. ರಾಯಚೂರು ಸಮಾಜ ಕಲ್ಯಾಣ ಇಲಾಖೆಯ ರಾಜಶೇಖರ ವಂದಿಸಿದರು. ಗ್ರಾಮಸ್ಥರು, ದಲಿತ ಸಮುದಾಯದ ಮುಖಂಡರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಸಭೆಯ ಮೂಲಕ ಗ್ರಾಮದಲ್ಲಿ ಶಾಂತಿ, ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಸೌಹಾರ್ದದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ದಿ.8 ರಂದು ಬೃಹತ್ ಬೈಕ್ ರ್‍ಯಾಲಿ-ಬಹಿರಂಗ ಸಭೆ

ಇಲಾಖೆ ನಡೆದುಕೊಳ್ಳುತ್ತಿದ್ದು, ತಿಡಿಗೋಳ ಚಲೋ ಕಾರ್ಯಕ್ರಮಕ್ಕೆ ಅನುಮತಿ ನಿರಾಕರಿಸಲು ಮುಂದಾಗಿದೆ ಎಂದು ದೂರಿದರು.

ದಲಿತರನ್ನು ತುಳಿಯುವ ಪ್ರಯತ್ನ: ರವೀಂದ್ರನಾಥ್ ಪಟ್ಟಿ ಆಕ್ರೋಶ

ಪ್ರಗತಿಪರ ಹೋರಾಟಗಾರ ರವೀಂದ್ರ ನಾಥ್ ಪಟ್ಟಿ ಮಾತನಾಡಿ, ದಲಿತರನ್ನು ತುಳಿಯುವ ಉದ್ದೇಶದಿಂದಲೇ ಅವರ ಮೇಲೆ ದಬ್ಬಾಳಿಕೆ ನಡೆ ಸಲಾಗುತ್ತಿದೆ. ಇಂತಹ ಘಟನೆಗಳು ನಡೆಯು ತ್ತಿದ್ದರೆ ಇದು ಕರ್ನಾಟ ಕವಲ್ಲ, ಬಿಹಾರ ರಾಜ್ಯವಾಗಿದೆಯೇ ಎಂಬ ಅನುಮಾನ ಮೂಡುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿ ದರು.

ಜಿಲ್ಲೆಯಲ್ಲಿ ದಲಿತ ಸಂಘಟನೆಗಳನ್ನು ದುರ್ಬಲಗೊಳಿಸಲು ಎಲ್ಲಾ ರಾಜಕೀಯ ಪಕ್ಷಗಳು ನಿರ್ಧರಿಸಿದಂತೆ ವರ್ತಿಸುತ್ತಿವೆ. ಜಿಲ್ಲಾಡಳಿತ ಸಂತ್ರಸ್ತರಿಗೆ ನ್ಯಾಯ ಒದಗಿಸ ದಿದ್ದರೆ ಹೋರಾಟ ತೀವ್ರಗೊಳಿಸಲಾ ಗುವುದು. ಮುಖ್ಯಮಂತ್ರಿ, ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಭಾವ ಚಿತ್ರಗಳನ್ನು ಇಟ್ಟುಕೊಂಡು ಪಿಂಡಪ್ರದಾನ ಮಾಡುವ ಮೂಲಕ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಶರಣಪ್ಪ ದಿನ್ನಿ, ಎಂ.ಆರ್. ಬೇರಿ, ಹೇಮರಾಜ್ ಆಸ್ಕಿಹಾಳ, ಜೈಭೀಮ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರಿಗೆ ಉದ್ಯೋಗ, ಕಾರ್ಯಸಾಧ್ಯವೇ?

ಇಲ್ಲಿ, ಸರೋಜಿನಿ ಮಹಿಷಿ ವರದಿಯೂ ಜಾರಿಯಾಗಲಿಲ್ಲ, ಕನ್ನಡ ಭಾಷೆ ಅನ್ನದ ಭಾಷೆಯೂ ಆಗಲಿಲ್ಲ, ಈಗ ಇಂಗ್ಲಿಷ್ ಕಲಿತ ಕನ್ನಡದ ಮಕ್ಕಳ ಭವಿಷ್ಯವೂ ಭದ್ರವಾಗುತ್ತಿಲ್ಲ, ಕನ್ನಡ ಬೌದ್ಧಿಕ ಜಗತ್ತು ಕೂಡ ಕಳವಳ ವ್ಯಕ್ತಪಡಿಸುತ್ತಿಲ್ಲ. ಪರಿಸ್ಥಿತಿ ಹೀಗಿರುವಾಗ ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರಿಗೆ ಉದ್ಯೋಗ ಕಾರ್ಯಸಾಧ್ಯವೇ ಎಂಬ ಪ್ರಶ್ನೆ, ಪ್ರಶ್ನೆಯಾಗಿಯೇ ಉಳಿದರೆ ಆಶ್ಚರ್ಯವಿಲ್ಲ.

ಅಕ್ಟೋಬರ್ ಕೊನೆ ವಾರದಲ್ಲಿ ಸೋಷಿಯಲ್ ಮೀಡಿಯಾದಲ್ಲಿ ಐಟಿ ಉದ್ಯೋಗಾಕಾಂಕ್ಷಿ ಯುವತಿಯೊಬ್ಬರು, ರೆಸ್ಯೂಮ್‌ನಲ್ಲಿ ಕನ್ನಡವನ್ನು ಮಾತೃಭಾಷೆ ಎಂದು ನಮೂದಿಸಿದ್ದಕ್ಕೆ ಐಟಿ ಕಂಪನಿಯೊಂದು ಉದ್ಯೋಗಾವಕಾಶ ನಿರಾಕರಿಸಿದೆ. ಕರ್ನಾಟಕದಲ್ಲಿ ಕನ್ನಡಿಗರಿಗೆ ಅನ್ಯಾಯವಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದರು.

ಅದು ಕನ್ನಡ ರಾಜ್ಯೋತ್ಸವಕ್ಕೆ ಕನ್ನಡಿಗರು ಸಿದ್ಧಗೊಳ್ಳುವ ಸಂದರ್ಭವಾದ್ದರಿಂದ ಸಹಜವಾಗಿಯೇ ಕನ್ನಡ ಯುವತಿಯ ವಿಡಿಯೋ ವೈರಲ್ ಆಯಿತು. ಕನ್ನಡಿಗರಲ್ಲಿ ಕನ್ನಡದ ಪ್ರಜ್ಞೆ ಜಾಗೃತವಾಯಿತು. ಕರ್ನಾಟಕದಲ್ಲಿ ಕನ್ನಡಿಗರಿಗೆ ಅನ್ಯಾಯ ಎಂಬುದು ಮುನ್ನೆಲೆಗೆ ಬಂದಿತು.

ಇದಕ್ಕೆ ಪೂರಕವಾಗಿ ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ನಿರಾಕರಿಸುವ, ರಾಜಧಾನಿ ಬೆಂಗಳೂರಿಗೆ ವಲಸಿಗರು ನೀರಿನಂತೆ ಹರಿದುಬರುತ್ತಿರುವ, ಕನ್ನಡ ಕಡೆಗಣಿಸುವವರ ಸಂಖ್ಯೆ ಹೆಚ್ಚಾಗುತ್ತಿರುವ, ಕರ್ನಾಟಕದಲ್ಲಿ ಕನ್ನಡವೇ ಕಣ್ಮರೆಯಾಗುತ್ತಿರುವ ಕುರಿತ ಚರ್ಚೆ ವ್ಯಾಪಕತೆ ಪಡೆಯಿತು. ಅದನ್ನು ಸೋಷಿಯಲ್ ಮೀಡಿಯಾ ಮತ್ತು ಮುಖ್ಯವಾಹಿನಿ ಮಾಧ್ಯಮಗಳು ಜೀವಂತವಾಗಿಟ್ಟವು.

ಅದೇ ಸಮಯಕ್ಕೆ ಸರಿಯಾಗಿ ನವೆಂಬರ್ 1 ಬಂದಿತು. ಕನ್ನಡ ರಾಜ್ಯೋತ್ಸವ ಆಚರಣೆ, ಸಾಧಕರನ್ನು ಗುರುತಿಸಿ ಸನ್ಮಾನ-ಸಂಭ್ರಮ ಸರ್ಕಾರದ ಭಾಗವಾಯಿತು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಹಜವಾಗಿಯೇ ಆ ವಾರ ಹೆಚ್ಚು ಚರ್ಚೆಯಲ್ಲಿದ್ದ ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡದೆ ಕಡೆಗಣಿಸಿದ ಸಂಗತಿಯತ್ತ ಗಮನ ಹರಿಸಿದರು. ತಕ್ಷಣ ಎಚ್ಚೆತ್ತವರಂತೆ ಐಟಿ ಕಂಪನಿಗಳಿಗೆ ಕಟು ಎಚ್ಚರಿಕೆ ನೀಡಿದರು. ಕರ್ನಾಟಕದಲ್ಲಿ ಕನ್ನಡಿಗನೇ ಸಾರ್ವಭೌಮ. ಕನ್ನಡಿಗರನ್ನು ಉದ್ದೇಶಪೂರ್ವಕವಾಗಿ ಉದ್ಯೋಗದಿಂದ ಕಡೆಗಣಿಸಿದ್ದರೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳುತ್ತದೆ ಎಂದೆಲ್ಲಾ ಗುಡುಗಿದರು.

ಮುಖ್ಯಮಂತ್ರಿಗಳು ಎಚ್ಚರಿಕೆ ನೀಡಿ ಒಂದು ವಾರ ಕಳೆಯಿತು. ಆದರೆ, ಆ ಎಚ್ಚರಿಕೆಯ ನಂತರ ನಡೆದ ಬೆಳವಣಿಗೆಗಳೇನು, ಖಾಸಗಿ ಕಂಪನಿಗಳಿಗೆ ನೋಟಿಸ್ ನೀಡಲಾಗಿದೆಯೇ, ತನಿಖೆ ಯಾವ ಹಂತದಲ್ಲಿದೆ, ಯಾವ ಕ್ರಮ ಜರುಗಿಸಲಾಗಿದೆ, ದೂರುದಾರರಿಗೆ ನ್ಯಾಯ ಒದಗಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ- ಈ ಪ್ರಶ್ನೆಗಳಿಗೆ ಇದುವರೆಗೂ ಸ್ಪಷ್ಟ ಉತ್ತರವಿಲ್ಲ.

ಇದೇ ರೀತಿ ಹಿಂದೊಮ್ಮೆ, ಜುಲೈ 2024ರಲ್ಲಿ, ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಕನ್ನಡಿಗರ ಉದ್ಯೋಗಾವಕಾಶಗಳನ್ನು ರಕ್ಷಿಸುವ ಉದ್ದೇಶದಿಂದ, ಬೆಂಗಳೂರಿನ ಐಟಿ-ಬಿಟಿ ಕಂಪನಿಗಳು ಸೇರಿದಂತೆ ಕರ್ನಾಟಕ ರಾಜ್ಯ ಕೈಗಾರಿಕೆಗಳು, ಕಾರ್ಖಾನೆಗಳು ಮತ್ತು ಇತರ ಸಂಸ್ಥೆಗಳಲ್ಲಿ ಸ್ಥಳೀಯ ಅಭ್ಯರ್ಥಿಗಳ ಉದ್ಯೋಗ ಮಸೂದೆ, 2024ಕ್ಕೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿತ್ತು. ಆದರೆ ಅದಾಗಿ ಇಲ್ಲಿಗೆ 18 ತಿಂಗಳು ಉರುಳಿ ಹೋಗಿವೆ. ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಮೀಸಲಾತಿ ಕಲ್ಪಿಸುವ ಆ ಪ್ರಸ್ತಾವಿತ ಮಸೂದೆ ಇವತ್ತಿಗೂ ಜಾರಿಯಾಗಿಲ್ಲ.

ಕುತೂಹಲಕರ ಸಂಗತಿ ಎಂದರೆ, ಆಗ ಐಟಿ ವಲಯದ ದಿಗ್ಗಜರು ಆ ಮಸೂದೆಯನ್ನು ತೀವ್ರವಾಗಿ ವಿರೋಧಿಸಿದರು. ಇದು ನೇಮಕಾತಿ ಪ್ರಕ್ರಿಯೆ, ವ್ಯವಹಾರ ನಿರ್ವಹಣೆ ಮತ್ತು ಕರ್ನಾಟಕದಲ್ಲಿನ ಹೂಡಿಕೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಎಂದು ಅವರು ಕಳವಳ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರವು ಮಸೂದೆಯ ಕರಡನ್ನು ತಡೆಹಿಡಿಯಿತು ಮತ್ತು ಅದನ್ನು ವಿಧಾನಸಭೆಯಲ್ಲಿ ಮಂಡಿಸದೆ ಮೌನಕ್ಕೆ ಜಾರಿತು.

ಉದ್ಯೋಗಗಳಲ್ಲಿ ಕನ್ನಡಿಗರಿಗೆ ಮೀಸಲಾತಿ ಕಲ್ಪಿಸುವ ಬದಲಾಗಿ ಖಾಸಗಿ ಕಂಪನಿಗಳು ತಮ್ಮ ಲಾಭದ ಒಂದು ಭಾಗವನ್ನು ಬಡವರ ಕಲ್ಯಾಣ, ಶಿಕ್ಷಣ, ಆರೋಗ್ಯ, ಪರಿಸರ ಸಂರಕ್ಷಣೆ ಮುಂತಾದ ಸಾರ್ವಜನಿಕ ಹಿತಾಸಕ್ತಿಯ ಕೆಲಸಗಳಿಗಾಗಿ ಖರ್ಚು ಮಾಡುವ ಅಲಿಖಿತ ಒಪ್ಪಂದ ಮಾಡಿಕೊಂಡವು. ಅದಕ್ಕೆ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ( ) ಎಂದು ಕರೆಯಲಾಗುತ್ತದೆ. ನಿವ್ವಳ ಲಾಭದ ಕನಿಷ್ಠ ಶೇ. 2ರಷ್ಟನ್ನು ಚಟುವಟಿಕೆಗಳಿಗೆ ಖರ್ಚು ಮಾಡಲಾಗುತ್ತದೆ ಎಂದು ಹೇಳಲಾಗಿದೆ.

ಆದರೆ, ಎಷ್ಟು ಖಾಸಗಿ ಕಂಪನಿಗಳು ಸಿಎಸ್‌ಆರ್ ಫಂಡನ್ನು ಸಮಾಜದ ಅಭಿವೃದ್ಧಿಗಾಗಿ ವಿನಿಯೋಗಿಸುತ್ತಿವೆ, ಅದು ಸರ್ಕಾರದ ಗಮನಕ್ಕೆ ಬಂದಿದೆಯೇ, ಕಂಪನಿಗಳು ಲೆಕ್ಕ ಕೊಟ್ಟಿವೆಯೇ ಪ್ರಶ್ನಿಸುವಂತಹ ಸ್ಥಿತಿಯಲ್ಲಿ ಸರ್ಕಾರವೂ ಇಲ್ಲ, ಖಾಸಗಿ ವಲಯವೂ ಅದನ್ನು ಬಯಸುವುದಿಲ್ಲ.

ಈ ಹಿನ್ನೆಲೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯು ಕನ್ನಡಿಗರ ಉದ್ಯೋಗದ ಹಕ್ಕುಗಳ ರಕ್ಷಣೆಗಾಗಿ ನವೆಂಬರ್ 1, ಕನ್ನಡ ರಾಜ್ಯೋತ್ಸವದ ದಿನದಿಂದ ಒಂದು ತಿಂಗಳ ಕಾಲ ರಾಜ್ಯದ ಐಟಿಬಿಟಿ ಸಂಸ್ಥೆಗಳನ್ನು ಸಂಪರ್ಕಿಸಿ ಮಾಹಿತಿ ಸಂಗ್ರಹಿಸುವ ಹಾಗೂ ಸ್ಥಳೀಯ ಅಭ್ಯರ್ಥಿಗಳಿಗೆ ನ್ಯಾಯಯುತ ಉದ್ಯೋಗಾವಕಾಶ ಕಲ್ಪಿಸುವಂತೆ ಆಗ್ರಹಿಸುವ ರಾಜ್ಯವ್ಯಾಪಿ ಅಭಿಯಾನವನ್ನು ಹಮ್ಮಿಕೊಂಡಿದೆ. ಅವರು ಮಾಹಿತಿ ಸಂಗ್ರಹಿಸಿ, ಸರ್ಕಾರವನ್ನು ಆಗ್ರಹಿಸಬಹುದೇ ಹೊರತು, ಕನ್ನಡಿಗರಿಗೆ ಕೆಲಸ ಕೊಡಿಸಲು ಸಾಧ್ಯವೇ ಎಂಬ ಪ್ರಶ್ನೆ ಎದುರಾಗುತ್ತದೆ.

ಇನ್ನು ಬೇರೆ ರಾಜ್ಯಗಳ ಸ್ಥಿತಿಗತಿ ಗಮನಿಸಿದರೆ, ಆಂಧ್ರಪ್ರದೇಶದಲ್ಲಿ ಖಾಸಗಿ ವಲಯದಲ್ಲಿ ಸ್ಥಳೀಯರಿಗೆ ಶೇ. 75ರಷ್ಟು ಉದ್ಯೋಗಗಳನ್ನು ಮೀಸಲಿರಿಸುವ ನಿಯಮ ಕಾನೂನಾತ್ಮಕ ಸವಾಲುಗಳನ್ನು ಎದುರಿಸುತ್ತಿದೆ. ತಮಿಳುನಾಡಿನಲ್ಲಿ ನೇರವಾಗಿ ಖಾಸಗಿ ವಲಯದಲ್ಲಿ ಕಡ್ಡಾಯ ಕೋಟಾ ಜಾರಿಗೆ ತಂದಿಲ್ಲವಾದರೂ, ಸ್ಥಳೀಯರಿಗೆ ಶೇ. 75ರಷ್ಟು ಉದ್ಯೋಗ ನೀಡುವ ಖಾಸಗಿ ಕಂಪನಿಗಳಿಗೆ ಜಿಎಸ್‌ಟಿ ಮತ್ತು ವಿದ್ಯುತ್ ಶುಲ್ಕದಲ್ಲಿ ಸಬ್ಸಿಡಿ ನೀಡುವಂತಹ ಪ್ರೋತ್ಸಾಹಕ ಯೋಜನೆ, ಚರ್ಚೆಯ ಹಂತದಲ್ಲಿದೆ. ಹರಿಯಾಣದಲ್ಲಿ ಜಾರಿಯಾಗಿದ್ದು, ನ್ಯಾಯಾಲಯದ ತಡೆಯಾಜ್ಞೆಯ ನಂತರ ಯಥಾಸ್ಥಿತಿ ಮುಂದುವರೆದಿದೆ.

2007-08ರಲ್ಲಿ ಉತ್ತರ ಪ್ರದೇಶದಲ್ಲಿ ಮಾಯಾವತಿಯವರು ಮುಖ್ಯಮಂತ್ರಿಯಾಗಿದ್ದಾಗ, ಖಾಸಗಿ ವಲಯದಲ್ಲಿ 30% ಉದ್ಯೋಗ ಮೀಸಲಾತಿಯನ್ನು ಜಾರಿಗೆ ತರಲು ಯತ್ನಿಸಿದ್ದರು. ಪರಿಶಿಷ್ಟ ಜಾತಿಗೆ 10, ಹಿಂದುಳಿದ ವರ್ಗಕ್ಕೆ 10, ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗಕ್ಕೆ 10 ಎಂದು ವಿಂಗಡಿಸಲಾಗಿತ್ತು. ಇದು ಮುಖ್ಯವಾಗಿ ಸರ್ಕಾರದಿಂದ ಭೂಮಿ, ಸಬ್ಸಿಡಿ, ತೆರಿಗೆ ರಿಯಾಯಿತಿ ಅಥವಾ ಇತರ ವಿಶೇಷ ಸೌಲಭ್ಯಗಳನ್ನು ಪಡೆಯುವ ಹೊಸ ಖಾಸಗಿ ಉದ್ಯಮಗಳಿಗೆ ಅನ್ವಯಿಸುವ ವ್ಯವಸ್ಥೆಯಾಗಿತ್ತು. ಆದರೆ, ಕಾಲಾನಂತರ ಅದು ಕಾಯ್ದೆಯಾಗಲಿಲ್ಲ. ಜಾರಿಗೂ ಬರಲಿಲ್ಲ.

ಕರ್ನಾಟಕ ರಾಜ್ಯ ಕೂಡ ಬಂಡವಾಳ ಆಕರ್ಷಿಸುವ ನಿಟ್ಟಿನಲ್ಲಿ ಸಚಿವರು-ಅಧಿಕಾರಿಗಳು ದೇಶ-ವಿದೇಶಗಳಿಗೆ ಭೇಟಿ ನೀಡುತ್ತಾರೆ. ಪ್ರತಿಷ್ಠಿತ ಖಾಸಗಿ ಕಂಪನಿ ಮಾಲೀಕರನ್ನು ರಾಜ್ಯಕ್ಕೆ ಬರಮಾಡಿಕೊಳ್ಳುತ್ತಾರೆ. ಅದಕ್ಕಾಗಿ ನಾಡಿನ ನೆಲ, ಜಲ, ವಿದ್ಯುತ್, ರಸ್ತೆಗಳು, ರಕ್ಷಣೆ, ಮಾನವ ಸಂಪನ್ಮೂಲ, ಸಾರ್ವಜನಿಕ ವ್ಯವಸ್ಥೆಗಳು ಹಾಗೂ ಸರ್ಕಾರದ ನೀತಿಗಳನ್ನು ಖಾಸಗಿ ಕಂಪನಿಗಳಿಗೆ ಅನುಕೂಲವಾಗುವಂತೆ ನೋಡಿಕೊಳ್ಳುತ್ತಾರೆ. ಅವರು ಇಲ್ಲಿ ಕಂಪನಿ-ಕಾರ್ಖಾನೆ ತೆರೆಯುವುದೇ ಭಾಗ್ಯವೆಂದು ಭ್ರಮಿಸುತ್ತಾರೆ. ಭಾರೀ ಉಮೇದಿನಲ್ಲಿ ಉದ್ಯೋಗ ಸೃಷ್ಟಿ ಮತ್ತು ಅಂಕಿ-ಸಂಖ್ಯೆಗಳ ಲೆಕ್ಕ ಕುರಿತು ಮಾತನಾಡುತ್ತಾರೆ.

ಆದರೆ ಸ್ಥಳೀಯ ಅಭ್ಯರ್ಥಿಗಳಿಗೆ- ಕನ್ನಡಿಗರಿಗೆ ಉದ್ಯೋಗದ ಅವಕಾಶ ನೀಡುವ ವಿಚಾರದಲ್ಲಿ ನಿರ್ಲಕ್ಷ್ಯ, ತಾರತಮ್ಯ ಅಥವಾ ಅಸ್ಪಷ್ಟ ನೇಮಕಾತಿ ಪದ್ಧತಿಗಳಿಗೆ ಅವಕಾಶವಿರಬಾರದು ಎಂಬುದನ್ನು ಯಾವ ಸರ್ಕಾರಗಳೂ ಒತ್ತಿ ಹೇಳುವುದಿಲ್ಲ, ಕಡ್ಡಾಯ ಮಾಡಿದ್ದಿಲ್ಲ.

ಕರ್ನಾಟಕದ ಪ್ರತಿಭಾವಂತ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸುವುದು ಕನ್ನಡಿಗರಿಗೆ ನೀಡುವ ಭಿಕ್ಷೆಯಲ್ಲ. ಅದು ಅವರ ಸಾಮಾಜಿಕ ಹೊಣೆಗಾರಿಕೆ. ಖಾಸಗಿ ಸಂಸ್ಥೆಗಳು ಸ್ಥಳೀಯರೊಂದಿಗೆ ಪ್ರೀತಿ, ಅಭಿಮಾನ, ಗೌರವದಿಂದ ಗುರುತಿಸಿಕೊಳ್ಳಬೇಕು. ಕನ್ನಡಿಗರಿಗೆ ಸೂಕ್ತ ಅವಕಾಶಗಳು ದೊರೆಯದಿದ್ದರೆ, ಅಂತಹ ಪರಿಸ್ಥಿತಿಯನ್ನು ಪರಿಶೀಲಿಸುವುದು ಮತ್ತು ಸರಿಪಡಿಸುವುದು ಸರ್ಕಾರದ ಕರ್ತವ್ಯವಾಗಬೇಕು, ಆಗಿಲ್ಲ.

ನವೆಂಬರ್ ಬಂದಾಗ ಕನ್ನಡ ಭಾಷಾ ಪ್ರೀತಿ ಮತ್ತು ಪ್ರಜ್ಞೆ ಎಚ್ಚರಗೊಳ್ಳುವುದು, ರಾಜ್ಯೋತ್ಸವದ ಮಾಸ ಮುಗಿಯುತ್ತಿದ್ದಂತೆ ಮರೆತು ಮಲಗುವುದು. ಹೀಗಾಗಿ ಇಲ್ಲಿ, ಸರೋಜಿನಿ ಮಹಿಷಿ ವರದಿಯೂ ಜಾರಿಯಾಗಲಿಲ್ಲ, ಕನ್ನಡ ಭಾಷೆ ಅನ್ನದ ಭಾಷೆಯೂ ಆಗಲಿಲ್ಲ, ಈಗ ಇಂಗ್ಲಿಷ್ ಕಲಿತ ಕನ್ನಡದ ಮಕ್ಕಳ ಭವಿಷ್ಯವೂ ಭದ್ರವಾಗುತ್ತಿಲ್ಲ, ಕನ್ನಡ ಬೌದ್ಧಿಕ ಜಗತ್ತು ಕೂಡ ಕಳವಳ ವ್ಯಕ್ತಪಡಿಸುತ್ತಿಲ್ಲ. ಪರಿಸ್ಥಿತಿ ಹೀಗಿರುವಾಗ ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರಿಗೆ ಉದ್ಯೋಗ ಕಾರ್ಯಸಾಧ್ಯವೇ ಎಂಬ ಪ್ರಶ್ನೆ, ಪ್ರಶ್ನೆಯಾಗಿಯೇ ಉಳಿದರೆ ಆಶ್ಚರ್ಯವಿಲ್ಲ.

ಮಧ್ಯಂತರ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಗರ್ವಭಂಗ: ಸೊಕ್ಕು ಮುರಿದ ಅಮೆರಿಕನ್ನರು

ಈ ಚುನಾವಣಾ ಫಲಿತಾಂಶದಿಂದ ಟ್ರಂಪ್ ಅವರು ತಮ್ಮ ಅಧ್ಯಕ್ಷ ಸ್ಥಾನವನ್ನು ಕಳೆದುಕೊಳ್ಳುವುದಿಲ್ಲ. ಆದರೆ, ಮುಂದಿನ ಜನವರಿ 3ರಂದು ಹೊಸ ಕಾಂಗ್ರೆಸ್ (ಸಂಸತ್ತು) ಅಸ್ತಿತ್ವಕ್ಕೆ ಬಂದ ಬಳಿಕ ಅವರ ಆಡಳಿತದ ಹಾದಿ ಅತ್ಯಂತ ದುರ್ಗಮವಾಗಲಿದೆ. ಹೊಸ ಬಹುಮತದೊಂದಿಗೆ ಡೆಮಾಕ್ರಟರು ಶಾಸನ ರಚನೆ, ಬಜೆಟ್ ಅನುಮೋದನೆ ಮತ್ತು ಉನ್ನತ ಹುದ್ದೆಗಳ ನೇಮಕಾತಿಯ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸಲಿದ್ದಾರೆ. ಅಲ್ಲದೆ, ಟ್ರಂಪ್ ಆಡಳಿತದ ತೀರ್ಮಾನಗಳ ವಿರುದ್ಧ ಕಠಿಣ ತನಿಖೆಗಳನ್ನು ಆರಂಭಿಸುವ ಅಧಿಕಾರವೂ ಅವರ ಕೈಸೇರಲಿದೆ.

ಅಮೆರಿಕದ ರಾಜಕಾರಣದಲ್ಲಿ ಮತ್ತೊಂದು ಅನಿರೀಕ್ಷಿತ ಹಾಗೂ ಬೃಹತ್ ಪಲ್ಲಟ ಸಂಭವಿಸಿದೆ. ಇತ್ತೀಚೆಗೆ ಮುಕ್ತಾಯವಾದ ಅಮೆರಿಕದ ಮಧ್ಯಂತರ ಚುನಾವಣೆಗಳಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ರಿಪಬ್ಲಿಕನ್ ಪಕ್ಷ ತೀವ್ರ ಹಿನ್ನಡೆ ಅನುಭವಿಸಿದೆ. ನಿರೀಕ್ಷೆಯಂತೆಯೇ, ವಿರೋಧ ಪಕ್ಷವಾದ ಡೆಮಾಕ್ರಟಿಕ್ ಪಾರ್ಟಿಯು ಅಮೆರಿಕದ ಸಂಸತ್ತಿನ ಎರಡೂ ಸದನಗಳಾದ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್ (ಪ್ರತಿನಿಧಿ ಸಭೆ) ಮತ್ತು ಸೆನೇಟ್‌ನಲ್ಲಿ ಭರ್ಜರಿ ಬಹುಮತ ಸಾಧಿಸಿದೆ. ಇದು ಕೇವಲ ಒಂದು ಸಾಧಾರಣ ಚುನಾವಣಾ ಸೋಲಲ್ಲ, ಬದಲಾಗಿ ಟ್ರಂಪ್ ಅವರ ಏಕಪಕ್ಷೀಯ ಆಡಳಿತ ವೈಖರಿ ಮತ್ತು ಅವರ ಮ್ಯಾಗಾ (ಮೇಕ್ ಅಮೆರಿಕ ಗ್ರೇಟ್ ಅಗೈನ್) ರಾಜಕಾರಣಕ್ಕೆ ಅಮೆರಿಕದ ಪ್ರಜೆಗಳು ನೀಡಿದ ಸ್ಪಷ್ಟ ಎಚ್ಚರಿಕೆಯ ಸಂದೇಶವಾಗಿದೆ.



ಚುನಾವಣಾ ಎಣಿಕೆಯ ಅಂತಿಮ ಹಂತದ ಅಂಕಿ-ಅಂಶಗಳು ಆಡಳಿತ ವಿರೋಧಿ ಅಲೆಯ ತೀವ್ರತೆಯನ್ನು ಮತ್ತಷ್ಟು ಸ್ಪಷ್ಟವಾಗಿ ಬಿಚ್ಚಿಟ್ಟಿವೆ. ಸೆನೇಟ್‌ನಲ್ಲಿ ಡೆಮಾಕ್ರಟಿಕ್ ಪಕ್ಷವು ತನ್ನ ಪ್ರಾಬಲ್ಯವನ್ನು ಇನ್ನಷ್ಟು ಭದ್ರಪಡಿಸಿಕೊಂಡಿದ್ದು, ಅಂತಿಮ ವರದಿಗಳ ಪ್ರಕಾರ 100 ಸದಸ್ಯ ಬಲದ ಸದನದಲ್ಲಿ 55 ಸ್ಥಾನಗಳನ್ನು ತನ್ನದಾಗಿಸಿಕೊಂಡಿದೆ. ರಿಪಬ್ಲಿಕನ್ನರು 45 ಸ್ಥಾನಗಳಿಗೆ ಉತ್ತಮ ಸ್ಥಾನ ಪಡೆದಿದ್ದಾರೆ. ಮತ್ತೊಂದೆಡೆ, ಪ್ರತಿನಿಧಿ ಸಭೆಯಲ್ಲಿ ಡೆಮಾಕ್ರಟರು ತಮ್ಮ ಬಲವನ್ನು ನಿರೀಕ್ಷೆಗೂ ಮೀರಿ ಹೆಚ್ಚಿಸಿಕೊಂಡಿದ್ದು, ಒಟ್ಟಾರೆ 35ಕ್ಕೂ ಹೆಚ್ಚು ಹೊಸ ಸ್ಥಾನಗಳನ್ನು ತಮ್ಮ ತೆಕ್ಕೆಗೆ ಸೆಳೆದುಕೊಂಡಿದ್ದಾರೆ. ಈ ಬೃಹತ್ ಮುನ್ನಡೆಯು ದೇಶಾದ್ಯಂತ ಟ್ರಂಪ್ ಆಡಳಿತದ ವಿರುದ್ಧ ಜನಾಭಿಪ್ರಾಯ ಎಷ್ಟರಮಟ್ಟಿಗೆ ತಿರುಗಿದೆ ಎಂಬುದಕ್ಕೆ ಸ್ಪಷ್ಟ ಕೈಗನ್ನಡಿಯಾಗಿದೆ.

ರಿಪಬ್ಲಿಕನ್ ಪಕ್ಷವು ಸೆನೇಟ್‌ನಲ್ಲಿ 45 ಸ್ಥಾನಗಳನ್ನು ಪಡೆದಿದ್ದರೂ, ಅಮೆರಿಕದ ಸಂಸದೀಯ ನಿಯಮಗಳ ಪ್ರಕಾರ ಅವರು ಸಂಪೂರ್ಣವಾಗಿ ಶಕ್ತಿಹೀನರಾಗುವುದಿಲ್ಲ. ವಾಸ್ತವದಲ್ಲಿ ಈ 45 ಸ್ಥಾನಗಳೂ ಅವರಿಗೆ ದೊಡ್ಡ ರಾಜಕೀಯ ಅಸ್ತ್ರವಾಗಿಯೇ ಕೆಲಸ ಮಾಡಲಿವೆ. ಅಮೆರಿಕದ ಸೆನೇಟ್‌ನಲ್ಲಿ ಯಾವುದೇ ಪ್ರಮುಖ ಕಾನೂನು ಜಾರಿಯಾಗಬೇಕಾದರೆ 100ರ ಪೈಕಿ ಕನಿಷ್ಠ 60 ಸದಸ್ಯರ ಒಪ್ಪಿಗೆ ಬೇಕೇಬೇಕು. ಡೆಮಾಕ್ರಟರ ಬಳಿ 55 ಸ್ಥಾನಗಳಿರುವುದರಿಂದ, ಅವರು ಕೇವಲ ತಮ್ಮ ಸ್ವಂತ ಬಲದಿಂದ ಏಕಾಂಗಿಯಾಗಿ ಕಾಯ್ದೆಗಳನ್ನು ಜಾರಿ ಮಾಡಲು ಸಾಧ್ಯವಿಲ್ಲ. ಹೀಗಾಗಿ, 45 ಸದಸ್ಯಬಲ ಹೊಂದಿರುವ ರಿಪಬ್ಲಿಕನ್ನರು ಡೆಮಾಕ್ರಟರ ಮಸೂದೆಗಳನ್ನು ಸುಲಭವಾಗಿ ತಡೆಯಬಲ್ಲ ಅಥವಾ ವಿಳಂಬ ಮಾಡಬಲ್ಲ ಪ್ರಬಲ ಶಕ್ತಿಯನ್ನು (ಇದನ್ನು ಅಲ್ಲಿನ ಭಾಷೆಯಲ್ಲಿ ಫಿಲಿಬರ್ಸ್ಟ್ ಎನ್ನುತ್ತಾರೆ) ಉಳಿಸಿಕೊಂಡಿದ್ದಾರೆ. ಅಲ್ಲದೆ, ಅಧ್ಯಕ್ಷ ಟ್ರಂಪ್ ಅವರ ಪರಮಾಧಿಕಾರವನ್ನು (ವೀಟೊ) ಅಸಿಂಧುಗೊಳಿಸಲು ವಿರೋಧ ಪಕ್ಷಕ್ಕೆ ಕನಿಷ್ಠ 67 ಸದಸ್ಯರ ಬೆಂಬಲ ಬೇಕಿರುವುದರಿಂದ, ಈ 45 ರಿಪಬ್ಲಿಕನ್ ಸದಸ್ಯರೇ ಟ್ರಂಪ್ ಆಡಳಿತಕ್ಕೆ ಬಲವಾದ ರಕ್ಷಣಾ ಕವಚವಾಗಿ ನಿಲ್ಲಲಿದ್ದಾರೆ. ಇದೇ ಅವರ ಪಾಲಿನ ತಾಂತ್ರಿಕ ಮುನ್ನಡೆಯಾಗಿದೆ.

ಈ ಅನಿರೀಕ್ಷಿತ ರಾಜಕೀಯ ತಿರುವಿಗೆ ಅತಿಮುಖ್ಯ ಕಾರಣ ದೇಶದ ಕುಸಿದ ಆರ್ಥಿಕತೆ ಮತ್ತು ಸಾಮಾನ್ಯರ ಬದುಕಿನ ಮೇಲಾದ ಬರೆ. ಜೀವನವೆಚ್ಚದ ಗಣನೀಯ ಏರಿಕೆ, ಮಿತಿಮೀರಿದ ಹಣದುಬ್ಬರ ಮತ್ತು ಸರ್ಕಾರದ ಕಠಿಣ ಸುಂಕ ನೀತಿಗಳು ಆಡಳಿತ ಪಕ್ಷಕ್ಕೆ ಮುಳುವಾಗಿವೆ. ಚುನಾವಣೋತ್ತರ ಸಮೀಕ್ಷೆಗಳ ದತ್ತಾಂಶವನ್ನು ಸೂಕ್ಷ್ಮವಾಗಿ ಗಮನಿಸಿದರೆ, ಮತದಾನದಲ್ಲಿ ಪಾಲ್ಗೊಂಡ ಹತ್ತರಲ್ಲಿ ಒಂಬತ್ತು ಜನರು ತಮಗೆ ಜೀವನವೆಚ್ಚವೇ ಮತದಾನದ ಪ್ರಮುಖ ಮಾನದಂಡವಾಗಿತ್ತು ಎಂದು ಕಡ್ಡಿಮುರಿದಂತೆ ಹೇಳಿದ್ದಾರೆ. ದೈನಂದಿನ ಬದುಕಿನ ಆರ್ಥಿಕ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಶ್ವೇತಭವನ ಸಂಪೂರ್ಣ ವಿಫಲವಾಗಿದೆ ಎಂಬ ಸಾಮಾನ್ಯ ಜನರ ಆಕ್ರೋಶವೇ ಈ ತೀರ್ಪಿಗೆ ಮೂಲ ಕಾರಣ.

ಆರ್ಥಿಕತೆಯ ಜೊತೆಗೆ, ವಿದೇಶಾಂಗ ನೀತಿಯಲ್ಲಿನ ಸರ್ಕಾರದ ನಿಲುವುಗಳು ಕೂಡ ಮತದಾರರ ಅಸಮಾಧಾನಕ್ಕೆ ತುಪ್ಪ ಸುರಿದಿವೆ. ವಿಶೇಷವಾಗಿ ಇರಾನ್ ಜೊತೆಗಿನ ಯುದ್ಧದ ಕಾರ್ಮೋಡಗಳು ಮತ್ತು ಅದರ ಸಂಭವನೀಯ ಪರಿಣಾಮಗಳು ಜನಸಾಮಾನ್ಯರನ್ನು ತೀವ್ರ ಆತಂಕಕ್ಕೀಡುಮಾಡಿದ್ದವು. ಅಮೆರಿಕವನ್ನು ಜಾಗತಿಕ ಮಟ್ಟದಲ್ಲಿ ಮತ್ತೆ ಉನ್ನತಮಟ್ಟಕ್ಕೇರಿಸುವ ಭರವಸೆ ನೀಡಿ ಅಧಿಕಾರ ಹಿಡಿದಿದ್ದ ನಾಯಕತ್ವ, ಇದೀಗ ದೇಶವನ್ನು ಮತ್ತೊಂದು ಅನಗತ್ಯ ಜಾಗತಿಕ ಸಂಘರ್ಷಕ್ಕೆ ದೂಡುತ್ತಿದೆ ಎಂಬ ಕಳವಳ ವ್ಯಾಪಕವಾಗಿತ್ತು. ಯುದ್ಧದಿಂದ ಸೃಷ್ಟಿಯಾಗುವ ಆರ್ಥಿಕ ಹೊರೆಯ ಭಯವು, ಮತದಾರರನ್ನು ವಿರೋಧ ಪಕ್ಷದತ್ತ ವಾಲುವಂತೆ ಮಾಡಿದೆ.

ಕೇವಲ ಎರಡೇ ವರ್ಷಗಳ ಅಲ್ಪಾವಧಿಯಲ್ಲಿ ಮತದಾರರ ಒಲವು ಈ ಪರಿ ಬದಲಾಗಿದ್ದು ರಾಜಕೀಯ ವಲಯದಲ್ಲಿ ಅಚ್ಚರಿ ಮೂಡಿಸಿದೆ. ಹಿಂದಿನ ಅಧ್ಯಕ್ಷೀಯ ಚುನಾವಣೆಯಲ್ಲಿ ಟ್ರಂಪ್ ಅವರನ್ನು ಬೆಂಬಲಿಸಿದ್ದ ಯುವ ಪುರುಷರು ಮತ್ತು ಲ್ಯಾಟಿನೊ ಸಮುದಾಯಗಳ ಭದ್ರ ಒಕ್ಕೂಟ ಈಗ ಸಂಪೂರ್ಣವಾಗಿ ಚದುರಿಹೋಗಿದೆ. ಆಕರ್ಷಕ ಭರವಸೆಗಳನ್ನು ನಂಬಿದ್ದ ಈ ಸಮುದಾಯಗಳು ಈಗ ಭ್ರಮನಿರಸನಗೊಂಡು ಡೆಮಾಕ್ರಟರತ್ತ ಮುಖಮಾಡಿವೆ. ರಿಪಬ್ಲಿಕನ್ನರ ಭದ್ರಕೋಟೆಗಳು ಎನಿಸಿಕೊಂಡಿದ್ದ ಎಷ್ಟೋ ಕ್ಷೇತ್ರಗಳಲ್ಲೇ ಟ್ರಂಪ್ ಬೆಂಬಲಿತ ಅಭ್ಯರ್ಥಿಗಳು ಮಣ್ಣುಮುಕ್ಕಿರುವುದು ಜನಾಭಿಪ್ರಾಯದ ದಿಢೀರ್ ಬದಲಾವಣೆಗೆ ಸಾಕ್ಷಿಯಾಗಿದೆ.

ಬಹುತೇಕ ಎಣಿಕೆ ಪೂರ್ಣಗೊಂಡಿರುವ ದೇಶದ ಸುಮಾರು 2,200 ಕೌಂಟಿಗಳಲ್ಲಿ (ಸ್ಥಳೀಯ ಆಡಳಿತ ವಿಭಾಗಗಳು), ಶೇಕಡಾ 99ರಷ್ಟು ಕಡೆಗಳಲ್ಲಿ ರಿಪಬ್ಲಿಕನ್ ಪಕ್ಷದ ಮತಪಾಲು ತೀವ್ರವಾಗಿ ಕುಸಿದಿರುವುದು ದಾಖಲಾಗಿದೆ. ಹಿಂದಿನ ಚುನಾವಣೆಯಲ್ಲಿ ಟ್ರಂಪ್ ಪಡೆದಿದ್ದ ಅಪಾರ ಬೆಂಬಲಕ್ಕೆ ಹೋಲಿಸಿದರೆ, ಈ ಬಾರಿಯ ಕುಸಿತ ಭಾರಿ ಪ್ರಮಾಣದ್ದಾಗಿದೆ. ಇದು ಕೇವಲ ಬೆರಳೆಣಿಕೆಯ ರಾಜ್ಯಗಳ ಹಿನ್ನಡೆಯಲ್ಲ, ಬದಲಾಗಿ ಇಡೀ ದೇಶದಾದ್ಯಂತ ವ್ಯಾಪಿಸಿರುವ ವ್ಯವಸ್ಥಿತ ಆಡಳಿತ ವಿರೋಧಿ ಅಲೆಯಾಗಿದೆ ಎಂಬುದನ್ನು ಈ ಸಂಖ್ಯೆಗಳು ಸಾರುತ್ತಿವೆ.

ಈ ಫಲಿತಾಂಶವನ್ನು ಅಮೆರಿಕದ ಪ್ರಜೆಗಳು ಟ್ರಂಪ್ ಅವರ ವ್ಯಕ್ತಿಕೇಂದ್ರಿತ ರಾಜಕಾರಣಕ್ಕೆ ನೀಡಿದ ನೇರ ತಿರಸ್ಕಾರ ಎಂದೇ ರಾಜಕೀಯ ತಜ್ಞರು ವಿಶ್ಲೇಷಿಸುತ್ತಿದ್ದಾರೆ. ಇಷ್ಟು ವರ್ಷಗಳ ಕಾಲ ತಮ್ಮ ಆಕ್ರಮಣಕಾರಿ ಶೈಲಿಯಿಂದಲೇ ರಾಜಕೀಯ ಪರಿಣಾಮಗಳನ್ನು ಎದುರಿಸದೆ ಜಾಣ್ಮೆಯಿಂದ ತಪ್ಪಿಸಿಕೊಳ್ಳುತ್ತಿದ್ದ ಟ್ರಂಪ್ ಅವರನ್ನು ವಾಸ್ತವ ಈಗ ಕಾಡತೊಡಗಿದೆ. ಪ್ರಜಾಪ್ರಭುತ್ವದಲ್ಲಿ ಯಾವುದೇ ನಾಯಕನ ವರ್ಚಸ್ಸಿಗಿಂತ ಜನಸಾಮಾನ್ಯರ ದೈನಂದಿನ ಬದುಕಿನ ಸಮಸ್ಯೆಗಳೇ ಅಂತಿಮ ತೀರ್ಪು ಬರೆಯುತ್ತವೆ ಎಂಬ ಸತ್ಯ, ಟ್ರಂಪ್ ಅವರ ಮಿತಿಮೀರಿದ ಆತ್ಮವಿಶ್ವಾಸಕ್ಕೆ ದೊಡ್ಡ ಪೆಟ್ಟನ್ನೇ ನೀಡಿದೆ.

ಈ ಹೀನಾಯ ಸೋಲು ಕೇವಲ ಡೆಮಾಕ್ರಟರಿಗೆ ವಿಜಯ ತಂದುಕೊಟ್ಟಿದ್ದಷ್ಟೇ ಅಲ್ಲ, ರಿಪಬ್ಲಿಕನ್ ಪಕ್ಷದೊಳಗೆ ಭಾರಿ ಒಳಜಗಳಕ್ಕೂ ನಾಂದಿ ಹಾಡಿದೆ. ಪಕ್ಷದ ಹಿರಿಯ ನಾಯಕರು ಮತ್ತು ಪ್ರಭಾವಿ ಸದಸ್ಯರು ಆಡಳಿತದ ದಿಕ್ಕು ಬದಲಾಗಬೇಕು ಎಂದು ಬಹಿರಂಗವಾಗಿಯೇ ಒತ್ತಾಯಿಸುತ್ತಿದ್ದಾರೆ. ಶ್ವೇತಭವನದ ಕಾರ್ಯವೈಖರಿ, ಹಠಮಾರಿ ಸುಂಕ ನೀತಿಗಳು ಮತ್ತು ನಾಯಕತ್ವದ ಶೈಲಿಯ ವಿರುದ್ಧ ಸ್ವಪಕ್ಷೀಯರೇ ಇದೀಗ ತಿರುಗಿಬಿದ್ದಿದ್ದಾರೆ. ''ಈ ಐತಿಹಾಸಿಕ ಸೋಲಿನ ಹೊಣೆಗಾರಿಕೆ ಯಾರದ್ದು?'' ಎಂಬ ಪ್ರಶ್ನೆ ರಿಪಬ್ಲಿಕನ್ ಪಾಳಯದಲ್ಲಿ ಭಾರಿ ಬಿರುಗಾಳಿಯನ್ನೇ ಎಬ್ಬಿಸಿದ್ದು, ನಾಯಕತ್ವದ ವಿರುದ್ಧದ ಅಸಮಾಧಾನ ಸ್ಫೋಟಗೊಂಡಿದೆ.

ಇಷ್ಟೆಲ್ಲಾ ಹಿನ್ನಡೆಯ ನಡುವೆಯೂ, ಸಾಂವಿಧಾನಿಕವಾಗಿ ಒಂದು ಮುಖ್ಯ ವಿಷಯವನ್ನು ಸ್ಪಷ್ಟಪಡಿಸಿಕೊಳ್ಳಬೇಕು. ಈ ಚುನಾವಣಾ ಫಲಿತಾಂಶದಿಂದ ಟ್ರಂಪ್ ಅವರು ತಮ್ಮ ಅಧ್ಯಕ್ಷ ಸ್ಥಾನವನ್ನು ಕಳೆದುಕೊಳ್ಳುವುದಿಲ್ಲ. ಆದರೆ, ಮುಂದಿನ ಜನವರಿ 3ರಂದು ಹೊಸ ಕಾಂಗ್ರೆಸ್ (ಸಂಸತ್ತು) ಅಸ್ತಿತ್ವಕ್ಕೆ ಬಂದ ಬಳಿಕ ಅವರ ಆಡಳಿತದ ಹಾದಿ ಅತ್ಯಂತ ದುರ್ಗಮವಾಗಲಿದೆ. ಹೊಸ ಬಹುಮತದೊಂದಿಗೆ ಡೆಮಾಕ್ರಟರು ಶಾಸನ ರಚನೆ, ಬಜೆಟ್ ಅನುಮೋದನೆ ಮತ್ತು ಉನ್ನತ ಹುದ್ದೆಗಳ ನೇಮಕಾತಿಯ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸಲಿದ್ದಾರೆ. ಅಲ್ಲದೆ, ಟ್ರಂಪ್ ಆಡಳಿತದ ತೀರ್ಮಾನಗಳ ವಿರುದ್ಧ ಕಠಿಣ ತನಿಖೆಗಳನ್ನು ಆರಂಭಿಸುವ ಅಧಿಕಾರವೂ ಅವರ ಕೈಸೇರಲಿದೆ.

ಹೊಸ ಸಂಸತ್ತು ರಚನೆಯಾದ ನಂತರದ ಎರಡು ವರ್ಷಗಳು ಅಮೆರಿಕದ ಮಟ್ಟಿಗೆ ತೀವ್ರ ರಾಜಕೀಯ ಸಂಘರ್ಷಮಯವಾಗಿರಲಿವೆ. ಸಂಸತ್ತಿನಲ್ಲಿ ಅಧಿಕಾರ ಬದಲಾದರೂ ಟ್ರಂಪ್ ಅವರ ವಿವಾದಾತ್ಮಕ ಸುಂಕ ನೀತಿಗಳನ್ನು ಡೆಮಾಕ್ರಟರು ತಕ್ಷಣವೇ ರದ್ದುಗೊಳಿಸಲು ಸಾಧ್ಯವಿಲ್ಲ; ಏಕೆಂದರೆ ಅಧ್ಯಕ್ಷರ ವಿಶೇಷ ಮರುಪರಿಶೀಲನಾ ಅಧಿಕಾರವಾದ ವೀಟೊ () ಮುಂದುವರಿಯುತ್ತದೆ. ಹೀಗಾಗಿ, ಶ್ವೇತಭವನ ಮತ್ತು ಸಂಸತ್ತಿನ ನಡುವೆ ಪ್ರತಿ ಹೆಜ್ಜೆಗೂ ಭಾರಿ ಅಧಿಕಾರದ ಹಗ್ಗಜಗ್ಗಾಟ ನಡೆಯುವುದು ನಿಶ್ಚಿತ. ಒಟ್ಟಾರೆಯಾಗಿ, ಈ ಚುನಾವಣೆಯ ಮೂಲಕ ಅಮೆರಿಕದ ಪ್ರಜೆಗಳು ಮೌನವಾಗಿಯೇ ತಮ್ಮ ಒಗ್ಗಟ್ಟಿನ ಶಕ್ತಿಯನ್ನು ಪ್ರದರ್ಶಿಸಿದ್ದು, ಮಿತಿಮೀರಿ ವರ್ತಿಸುತ್ತಿದ್ದ ಆಡಳಿತಕ್ಕೆ ಪ್ರಜಾಸತ್ತಾತ್ಮಕ ಕಡಿವಾಣ ಹಾಕಿದ್ದಾರೆ.

ಇತ್ತ ಬೆಲೆ ಏರಿಕೆಯ 'ಬರೆ', ಅತ್ತ 1 ಟ್ರಿಲಿಯನ್ 'ಕನಸು'; ಮೋದಿ ಹಾದಿಯಲ್ಲೇ ಕಾಂಗ್ರೆಸ್ ನಡಿಗೆ!

ಒಂದೆಡೆ ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿ ಜನಸಾಮಾನ್ಯರ ಜೇಬಿಗೆ ಕತ್ತರಿ ಬೀಳುತ್ತಿದ್ದರೆ, ಇನ್ನೊಂದೆಡೆ ರಾಜ್ಯ ಕಾಂಗ್ರೆಸ್ ಸರ್ಕಾರ ''ಟ್ರಿಲಿಯನ್ ಡಾಲರ್ ಆರ್ಥಿಕತೆ''ಯ ಭವ್ಯ ಚಿತ್ರಣವನ್ನು ಸಾರ್ವಜನಿಕರ ಮುಂದಿಡುತ್ತಿವೆ. ಸದ್ಯ ಕರ್ನಾಟಕದಲ್ಲಿ ಕಂಡುಬರುತ್ತಿರುವ ರಾಜಕೀಯ ಹಾಗೂ ಆರ್ಥಿಕ ವಿದ್ಯಮಾನಗಳು, ಬೆಲೆ ಏರಿಕೆಯ ಬರೆ ಮತ್ತು ಅಭಿವೃದ್ಧಿಯ ಆಕರ್ಷಕ ಆಸೆಯ ನಡುವಿನ ವ್ಯತ್ಯಾಸವನ್ನು ಸ್ಪಷ್ಟವಾಗಿ ಬಿಂಬಿಸುತ್ತಿವೆ. ಈ ನಡೆಯು ಕೇಂದ್ರದ ಬಿಜೆಪಿ ಸರ್ಕಾರದ ಧೋರಣೆಗಳನ್ನೇ ರಾಜ್ಯದ ಕಾಂಗ್ರೆಸ್ ಸರ್ಕಾರವೂ ಅನುಕರಿಸುತ್ತಿದೆಯೇ ಎಂಬ ಗಂಭೀರ ಚರ್ಚೆಗೆ ನಾಂದಿ ಹಾಡಿದೆ.


ದಸರಾ ಮತ್ತು ದೀಪಾವಳಿಯ ಹಬ್ಬದ ಸೀಸನ್ ಬೆನ್ನಲ್ಲೇ ಸಾರ್ವಜನಿಕರಿಗೆ ಸಾಲು ಸಾಲು ಆಘಾತಗಳು ಎದುರಾಗಿವೆ. ನಂದಿನಿ ಹಾಲಿನ ದರ ಲೀಟರ್‌ಗೆ ₹8 ರಿಂದ ₹12 ರವರೆಗೆ ಏರಿಕೆಯಾಗಿದ್ದರೆ, ಮೊಸರಿನ ಬೆಲೆ ಲೀಟರ್‌ಗೆ ಭಾರಿ ₹12 ಹೆಚ್ಚಾಗಿದೆ. ಪರಿಣಾಮವಾಗಿ ಹೋಟೆಲ್ ಹಾಗೂ ಟೀ ಅಂಗಡಿಗಳಲ್ಲಿ ಚಹಾ-ಕಾಫಿ ಬೆಲೆ ₹3 ರಿಂದ ₹5 ರಷ್ಟು ಏರಿಕೆಯಾಗಿದೆ.

ಬಿಎಂಟಿಸಿ ಮತ್ತು ಕೆಎಸ್‌ಆರ್‌ಟಿಸಿ ಸೇರಿದಂತೆ ನಾಲ್ಕೂ ರಸ್ತೆ ಸಾರಿಗೆ ನಿಗಮಗಳ ಪ್ರಯಾಣ ದರ ಶೇ. 23 ರಿಂದ 33 ರಷ್ಟು ಏರಿಕೆಯಾಗಿದೆ. ಬಿಎಂಟಿಸಿ ಕನಿಷ್ಠ ಟಿಕೆಟ್ ದರ ₹6 ರಿಂದ ₹10ಕ್ಕೆ ಏರಿದ್ದರೆ, ವಾಯುವಜ್ರ ದರಗಳು ₹90 ತಲುಪಿವೆ.

ಉಚಿತ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣ ನೀಡುತ್ತಿರುವ ಸರ್ಕಾರ, ಇನ್ನೊಂದೆಡೆ ಹಾಲು, ದಿನಸಿ ಹಾಗೂ ಬಸ್ ದರ ಹೆಚ್ಚಿಸುವ ಮೂಲಕ ''ಒಂದು ಕೈಯಲ್ಲಿ ನೀಡಿ ಇನ್ನೊಂದು ಕೈಯಲ್ಲಿ ಕಸಿದುಕೊಳ್ಳುತ್ತಿದೆ'' ಎಂದು ಸಾರ್ವಜನಿಕರು ಹಾಗೂ ಸಣ್ಣ ವ್ಯಾಪಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಜನಸಾಮಾನ್ಯರು ಪ್ರತಿಯೊಂದು ಅಗತ್ಯ ವಸ್ತುವಿಗೂ ಹೆಣಗಾಡುತ್ತಿರುವಾಗ, ಆಡಳಿತ ಯಂತ್ರ ಮಾತ್ರ ಬೃಹತ್ ಅಂಕಿ-ಅಂಶಗಳ ಹಿಂದೆ ಬಿದ್ದಂತೆ ಕಾಣುತ್ತಿದೆ. ಇತ್ತೀಚೆಗೆ ನಡೆದ ಬೆಂಗಳೂರು ಕೌಶಲ್ಯ ಶೃಂಗಸಭೆ-2026ರಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ''2032ರ ವೇಳೆಗೆ ಕರ್ನಾಟಕವನ್ನು 1 ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನಾಗಿ ಮಾಡುವ ಗುರಿ ಹೊಂದಲಾಗಿದೆ'' ಎಂದು ಘೋಷಿಸಿದ್ದಾರೆ.

ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶವನ್ನು 5 ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನಾಗಿ ಮಾಡುವ ಭರವಸೆ ನೀಡುತ್ತಾ, ಇನ್ನೊಂದೆಡೆ ಇಂಧನ, ಗ್ಯಾಸ್ ಮತ್ತು ತೆರಿಗೆ ಹೊರೆ ಏರಿಸುತ್ತಿದ್ದ ಮಾದರಿಯನ್ನೇ ರಾಜ್ಯದ ಕಾಂಗ್ರೆಸ್ ಸರ್ಕಾರವೂ ಮರುಸೃಷ್ಟಿಸುತ್ತಿದೆ ಎಂಬ ವಿಶ್ಲೇಷಣೆಗಳು ಕೇಳಿಬರುತ್ತಿವೆ. ಬಂಡವಾಳ ಆಕರ್ಷಣೆ, ಐಟಿ-ಬಿಟಿ ಸಾಮರ್ಥ್ಯ ಮತ್ತು ಜನಸಂಖ್ಯೆಯ ಲಾಭಾಂಶಗಳ ದೊಡ್ಡ ಮಾತುಗಳ ನಡುವೆ ಕೆಳಮಧ್ಯಮ ವರ್ಗದ ವಾಸ್ತವಿಕ ಸಂಕಷ್ಟಗಳು ಮರೆಯಾಗುತ್ತಿವೆ.



ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ನೀಡಿದ್ದ ಗ್ಯಾರಂಟಿ ಯೋಜನೆಗಳ ವೆಚ್ಚ ಸರಿದೂಗಿಸಲು ಹಾಗೂ ನಿಗಮಗಳ ನಷ್ಟ ಸರಿದೂಗಿಸಲು ಈ ಬೆಲೆ ಏರಿಕೆ ಅನಿವಾರ್ಯ ಎಂಬ ಸಮರ್ಥನೆ ಸರ್ಕಾರದ ಕಡೆಯಿಂದ ಬರುತ್ತಿದೆ. ಆದರೆ, ಕೋಲಾರದಂತಹ ಭಾಗದ ಹಾಲು ಉತ್ಪಾದಕ ರೈತರಿಗೆ ಮೇವಿನ ವೆಚ್ಚ ಹೆಚ್ಚಾಗಿ ಆರ್ಥಿಕ ಸಂಕಷ್ಟದಲ್ಲಿದ್ದರೆ, ಸರ್ಕಾರ ನೀಡುವ ಬೆಲೆ ಏರಿಕೆಯ ಲಾಭ ಅವರಿಗೆ ಪೂರ್ಣ ಪ್ರಮಾಣದಲ್ಲಿ ತಲುಪುತ್ತಿಲ್ಲ. ದಿನಗೂಲಿ ನೌಕರರು, ಐಟಿ-ಯೇತರ ನೌಕರರು ಮತ್ತು ಸಣ್ಣ ಅಂಗಡಿಕಾರರ ಬಜೆಟ್ ಸಂಪೂರ್ಣ ತಲೆಕೆಳಗಾಗಿದೆ.

ವಿರೋಧ ಪಕ್ಷದಲ್ಲಿದ್ದಾಗ ಬೆಲೆ ಏರಿಕೆಯ ವಿರುದ್ಧ ಬೀದಿಗಿಳಿದು ಹೋರಾಡುತ್ತಿದ್ದ ಕಾಂಗ್ರೆಸ್, ಈಗ ಅಧಿಕಾರದಲ್ಲಿದ್ದಾಗ ಅದೇ ಬೆಲೆ ಏರಿಕೆಯನ್ನು ಸಮರ್ಥಿಸಿಕೊಳ್ಳುತ್ತಿರುವುದು ಮತ್ತು ಜಾಗತಿಕ ಅಂಕಿ-ಅಂಶಗಳ ಮುಸುಕಿನಲ್ಲಿ ವಾಸ್ತವವನ್ನು ಮರೆಮಾಚಲು ಯತ್ನಿಸುತ್ತಿರುವುದು ಕಾಂಗ್ರೆಸ್ ಪಕ್ಷವು ಆಡಳಿತಾತ್ಮಕವಾಗಿ ''ಇನ್ನೊಂದು ಬಿಜೆಪಿ''ಯಾಗಿ ಬದಲಾಗುತ್ತಿದೆಯೇ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ.

2032ರ ವೇಳೆಗೆ 1 ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗುವ ಕರ್ನಾಟಕದ ಗುರಿಯು ಅತ್ಯಂತ ಮಹತ್ವಾಕಾಂಕ್ಷೆಯದ್ದಾಗಿದ್ದರೂ, ಇದನ್ನು ತಲುಪಲು ರಾಜ್ಯವು ಹಲವು ಸಂಕೀರ್ಣ ಆರ್ಥಿಕ ಹಾಗೂ ಮೂಲಸೌಕರ್ಯ ಸವಾಲುಗಳನ್ನು ಮೆಟ್ಟಿ ನಿಲ್ಲಬೇಕಾಗಿದೆ. ಪ್ರಸ್ತುತ ರಾಜ್ಯದ ಆರ್ಥಿಕತೆಯು ಸುಮಾರು 300-350 ಬಿಲಿಯನ್ ಡಾಲರ್ ಆಸುಪಾಸಿನಲ್ಲಿದ್ದು, ಈ ಗುರಿಯನ್ನು ಮುಟ್ಟಲು ಮುಂದಿನ ವರ್ಷಗಳಲ್ಲಿ ವಾರ್ಷಿಕ ಸರಾಸರಿ ಶೇಕಡಾ 15 ಕ್ಕಿಂತ ಹೆಚ್ಚಿನ ಬೆಳವಣಿಗೆ ದರ ಅಗತ್ಯವಿದೆ. ಆದರೆ, ರಾಜ್ಯದ ಒಟ್ಟು ಆರ್ಥಿಕ ಉತ್ಪಾದನೆಗೆ ಸಿಂಹಪಾಲು ನೀಡುವ ಬೆಂಗಳೂರು ನಗರವು ತೀವ್ರ ಸಂಚಾರ ದಟ್ಟಣೆ, ರಸ್ತೆಗಳ ದುಸ್ಥಿತಿ, ಕುಡಿಯುವ ನೀರಿನ ಅಭಾವ ಮತ್ತು ಸಾರಿಗೆ ಮೂಲಸೌಕರ್ಯಗಳ ಕೊರತೆಯಿಂದ ಬಳಲುತ್ತಿದ್ದು, ಜಾಗತಿಕ ಹೂಡಿಕೆದಾರರನ್ನು ಆಕರ್ಷಿಸಲು ಅಡ್ಡಿಯಾಗಿದೆ.

ಇದರೊಂದಿಗೆ, ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡದಂತಹ ಎರಡನೇ ಮತ್ತು ಮೂರನೇ ಹಂತದ ನಗರಗಳು ಇನ್ನೂ ಪೂರ್ಣ ಪ್ರಮಾಣದ ಆರ್ಥಿಕ ಕೇಂದ್ರಗಳಾಗಿ ಬೆಳೆಯದೇ ಇರುವುದು ಮತ್ತು ಉತ್ತರ ಕರ್ನಾಟಕ ಹಾಗೂ ದಕ್ಷಿಣ ಕರ್ನಾಟಕದ ನಡುವಿನ ಪ್ರಾದೇಶಿಕ ಅಸಮಾನತೆಯು ಸಮಗ್ರ ಬೆಳವಣಿಗೆಗೆ ತೊಡಕಾಗಿದೆ.

ಆರ್ಥಿಕ ಬೆಳವಣಿಗೆ ಮತ್ತು ಬೃಹತ್ ಜಾಗತಿಕ ಗುರಿಗಳು ರಾಜ್ಯದ ಪ್ರಗತಿಗೆ ಅಗತ್ಯ ನಿಜ. ಆದರೆ, ಆ ಪ್ರಗತಿಯ ಹಾದಿಯಲ್ಲಿ ಪ್ರತಿಯೊಬ್ಬ ನಾಗರಿಕನ ತಟ್ಟೆಯ ಅನ್ನ, ಕಪ್ ಕಾಫಿ ಮತ್ತು ದಿನನಿತ್ಯದ ಪ್ರಯಾಣವೂ ದುಬಾರಿಯಾಗುತ್ತಾ ಹೋದರೆ, ಆ ಟ್ರಿಲಿಯನ್ ಡಾಲರ್ ಆರ್ಥಿಕತೆಯ ಲಾಭ ಯಾರಿಗೆ? ರಾಜಕೀಯ ಬಣ್ಣಗಳು ಏನೇ ಇರಲಿ, ಅಧಿಕಾರಕ್ಕೆ ಬಂದ ಮೇಲೆ ಸಾರ್ವಜನಿಕರ ಜೇಬಿಗೆ ಕತ್ತರಿ ಹಾಕಿ ಅಭಿವೃದ್ಧಿಯ ಚಿತ್ರಣ ಕೊಡುವ ಆಡಳಿತ ವೈಖರಿಯಲ್ಲಿ ಎಲ್ಲ ಪಕ್ಷಗಳೂ ಒಂದೇ ನಾಣ್ಯದ ಎರಡು ಮುಖಗಳಂತೆ ಕಾಣುತ್ತಿರುವುದು ಇಂದಿನ ದುರಂತ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR